ಸಂಪುಟ : 9 ಸಂಚಿಕೆ 42 ಪುಟ : 4 ಬೆಲೆ: 3.00 ಗುರುವಾರ ಮಾರ್ಚ್ 14 2024 Mob : 9448326533- 9019256545 ಗದಗ

ಸಂಪಾದಕರು : ಎಚ್.ಎಮ್. ಶರೀಫನವರ್

# ವಿಜಯ ಸಾಕ್ಷಿ

ವಾಸ್ತವ, ವಸ್ತುನಿಷ್ಠ, ವಿಭಿನ್ನ... VIJAYA SAKSHI KANNADA DAILY ಕನ್ನಡ ದಿನಪತ್ರಿಕೆ




Volume : 9 Issue : 42 Pages : 4 Price : 3.00 Thursday March 14 2024 Gadag RNINo:KARKAN/2015/63412 E-mail: vijayasakshidaily@gmail.com Post Regn.No:GDG/72/2023-25

### ಗದಗ ತಾಲೂಕಾ ಗ್ಯಾರಂಟಿ ಯೋಜನೆಗಳ ಫಲಾನುಭವಿಗಳ ಸಮಾವೇಶದಲ್ಲಿ ಸಚಿವ ಎಚ್.ಕೆ. ಪಾಟೀಲ

# ಗ್ಯಾರಂಟಿ ಯೋಜನೆಗಳಂತಹ ಕಾರ್ಯಕ್ರಮ ಜಗತ್ತಿನಲ್ಲಿಯೇ ಇಲ್ಲ



■ ವಿಜಯಸಾಕ್ಷಿ ಸುದ್ದಿ, ಗದಗ

ಚುನಾವಣಾ ಸಂದರ್ಭದಲ್ಲಿ ಪ್ರತಿ ಮನೆ ಮನೆಗೆ ಗ್ಯಾರಂಟಿ ಕಾರ್ಡುಗಳನ್ನು ನೀಡಲಾಗಿತ್ತು. ಚುನಾವಣಾ ನಂತರ ಅಧಿಕಾರಕ್ಕೆ ಬಂದ ಮುಖ್ಯಮಂತ್ರಿ ಸಿದ್ಧರಾಮಯ್ಯ ನೇತೃತ್ವದ ಸರ್ಕಾರ ಚುನಾವಣಾ ಪೂರ್ವ ನೀಡಿದ ಗ್ಯಾರಂಟಿ ಭರವಸೆಗಳನ್ನು ಸಮರ್ಪಕವಾಗಿ ಈಡೇರಿಸಿದೆ ಎಂದು ಗದಗ ಜಿಲ್ಲಾ ಉಸ್ತುವಾರಿ ಸಚಿವ ಎಚ್.ಕೆ. ಪಾಟೀಲ ಹೇಳಿದರು.

ನಗರದ ಲಕ್ಷ್ಮೇಶ್ವರ ರಸ್ತೆಯ ಮುಳಗುಂದದ ಆರ್.ಎನ್. ದೇಶಪಾಂಡೆ ಅವರ ಜಮೀನಿನಲ್ಲಿ ಬುಧವಾರ ಏರ್ಪಡಿಸಿದ್ದ ಗದಗ ತಾಲೂಕು ಗ್ಯಾರಂಟಿ ಯೋಜನೆಗಳ ಫಲಾನುಭವಿಗಳ ಸಮಾವೇಶ ಹಾಗೂ ವಿವಿಧ ಅಭಿವೃದ್ಧಿ ಕಾಮಗಾರಿಗಳ ಶಂಕುಸ್ಥಾಪನೆ ನೆರವೇರಿಸಿ ಅವರು ಮಾತನಾಡಿದರು.

> ರಾಜ್ಯದಲ್ಲಿ ಪಂಚ ಗ್ಯಾರಂಟಿ ಯೋಜನೆಗಳ ಅನುಷ್ಠಾನದಿಂದ ಅಭಿವೃದ್ಧಿಯ ಪ್ರಗತಿ ಪರ್ವ ನಿರಂತರವಾಗಿ ಮುನ್ನಡೆದಿದೆ. ಬಡವರ ಆರ್ಥಿಕತೆಯನ್ನು ಅಭಿವೃದ್ಧಿಯತ್ತ ಕೊಂಡೊಯ್ಯುವಲ್ಲಿ ಪಂಚ ಗ್ಯಾರಂಟಿಗಳು ಕ್ರಾಂತಿಕಾರಕ ಹೆಜ್ಜೆಯನ್ನಿರಿಸಿವೆ. ರಾಜ್ಯದ 1.10 ಕೋಟಿ ಜನರನ್ನು ಪಂಚ ಗ್ಯಾರಂಟಿ ಯೋಜನೆಗಳ ಮೂಲಕ ಬಡತನದಿಂದ ಮೇಲೆ ತರಲಾಗಿದೆ. ಪಂಚ ಗ್ಯಾರಂಟಿಗಳಿಂದ ಪ್ರತಿ ಕುಟುಂಬಕ್ಕೆ ಪ್ರತಿ ತಿಂಗಳು 5 ಸಾವಿರ ರೂ.ಗಳ ಆರ್ಥಿಕ ಅನುಕೂಲವಾಗಲಿದೆ. ವರ್ಷಕ್ಕೆ 60 ಸಾವಿರ ರೂ. ಪ್ರತಿ ಕುಟುಂಬಕ್ಕೆ ಗ್ಯಾರಂಟಿಗಳ ಅನುಷ್ಠಾನದಿಂದ ಅನುಕೂಲವಾಗಲಿದೆ. ಜಗತ್ತಿನಲ್ಲಿಯೇ ಗ್ಯಾರಂಟಿ ಯೋಜನೆಗಳಂತಹ ಕಾರ್ಯಕ್ರಮಗಳನ್ನು ಎಲ್ಲಿಯೂ ಕಾಣಲಾಗದು.
>
> – ಎಚ್.ಕೆ. ಪಾಟೀಲ.
> ಕಾನೂನು, ಪ್ರವಾಸೋದ್ಯಮ, ಜಿಲ್ಲಾ ಉಸ್ತುವಾರಿ ಸಚಿವರು.

ಪಂಚ ಗ್ಯಾರಂಟಿಗಳ ಅನುಷ್ಠಾನದಲ್ಲಿ ದಲ್ಲಾಳಿಗಳ ಹಾವಳಿಗೆ ನಮ್ಮ ಸರ್ಕಾರ ಸಂಪೂರ್ಣ ಕಡಿವಾಣ ಹಾಕಿದೆ. ಪಾರದರ್ಶಕ ಆಡಳಿತ ನೀಡುವ ಮೂಲಕ ಬಡವರ, ದೀನ-ದಲಿತರ ಪರವಾಗಿ ಹಗಲಿರುಳು ಕೆಲಸ ಮಾಡುತ್ತಿದೆ. ಬಡವರ ಸರ್ಕಾರಕ್ಕೆ ಜನಾಶೀರ್ವಾದ ನಿರಂತರವಾಗಿ ಇರಲೆಂದು ಕೋರಿದರು.

ಗದಗ ಜಿಲ್ಲೆಯಲ್ಲಿ ಅನ್ನಭಾಗ್ಯ ಯೋಜನೆಯನ್ನು ಶೇ.93ರಷ್ಟು ಜಾರಿಗೊಳಿಸಲಾಗಿದೆ. 2.18 ಲಕ್ಷ ಕಾರ್ಡುಗಳಿದ್ದು 7.84 ಲಕ್ಷ ಕುಟುಂಬ ಸದಸ್ಯರಿಗೆ ಪ್ರತಿ ತಿಂಗಳು 11.96 ಕೋಟಿ ಮೊತ್ತವನ್ನು ನೇರವಾಗಿ ಫಲಾನುಭವಿಗಳಿಗೆ ನೀಡಲಾಗುತ್ತಿದೆ. ಗೃಹಲಕ್ಷ್ಮೀ ಯೋಜನೆಯಡಿ ಜಿಲ್ಲೆಯಲ್ಲಿ ಶೇ. 99.16ರಷ್ಟು ಗುರಿ ಸಾಧನೆಯಾಗಿದೆ.

2.20 ಲಕ್ಷ ಫಲಾನುಭವಿಗಳಿಗೆ ಎರಡು ಸಾವಿರ ರೂ.ಗಳಂತೆ ಪ್ರತಿ ತಿಂಗಳಿಗೆ 44 ಕೋಟಿ ರೂ.ಗಳನ್ನು ನೀಡಲಾಗುತ್ತಿದೆ. ಗೃಹಜ್ಯೋತಿಯಡಿ ಶೇ.100ರಷ್ಟು ಗುರಿ ಸಾಧನೆಯಾಗಿದೆ. ಯುವ ನಿಧಿಯಡಿ ಜಿಲ್ಲೆಯ 259 ಫಲಾನುಭವಿಗಳಿಗೆ ಹಣ ಪಾವತಿ ಮಾಡಲಾಗಿದೆ. ಶಕ್ತಿ ಯೋಜನೆಯಡಿ ಜೂನ್ 11ರಿಂದ ಈವರೆಗೆ ಜಿಲ್ಲೆಯಲ್ಲಿ 3.72 ಕೋಟಿ ಮಹಿಳಾ ಪ್ರಯಾಣಿಕರು ಯೋಜನೆಯ ಪ್ರಯೋಜನ ಪಡೆದಿದ್ದಾರೆ ಎಂದು ಹೇಳಿದರು.



> ಗದಗ ತಾಲೂಕಿನಲ್ಲಿ ಅನ್ನಭಾಗ್ಯ ಯೋಜನೆಯ ಶೇ. 92.96ರಷ್ಟು, ಗೃಹಲಕ್ಷ್ಮೀ ಶೇ. 90.33ರಷ್ಟು, ಗೃಹಜ್ಯೋತಿ ಶೇ. 99.11 ಗುರಿ ಸಾಧನೆಯಾಗಿದೆ. ಶಕ್ತಿ ಯೋಜನೆಯಡಿ 1.14 ಕೋಟಿ ಮಹಿಳೆಯರು ತಮ್ಮ ಪ್ರಯಾಣ ಮಾಡುವ ಮೂಲಕ ಸರ್ಕಾರದ ಗ್ಯಾರಂಟಿ ಯೋಜನೆಗಳ ಪ್ರಯೋಜನವನ್ನು ಪಡೆದಿದ್ದಾರೆ. ಸಿದ್ಧರಾಮಯ್ಯ ನೇತೃತ್ವದ ರಾಜ್ಯ ಸರ್ಕಾರ ಪಂಚಗ್ಯಾರಂಟಿ ಯೋಜನೆಗಳನ್ನು ನಿರಂತರವಾಗಿ ಮುನ್ನಡೆಸಲಿದ್ದು, ಇದಕ್ಕಾಗಿ ಬಜೆಟ್‌ನಲ್ಲಿ 58 ಸಾವಿರ ಕೋಟಿ ರೂ.ಗಳ ಅನುದಾನವನ್ನು ಮೀಸಲಿರಿಸಿದೆ ಎಂದು ಸಚಿವ ಎಚ್.ಕೆ. ಪಾಟೀಲ ವಿವರಿಸಿದರು.

▶▶ 3ನೇ ಪುಟಕ್ಕೆ

## ವಸತಿ ಶಾಲೆಗಳ ದಾಖಲಾತಿಗಾಗಿ ಅರ್ಜಿ ಆಹ್ವಾನ

■ ವಿಜಯಸಾಕ್ಷಿ ಸುದ್ದಿ, ಗದಗ

ಗದಗ ಜಿಲ್ಲಾ ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆಯಡಿ ಗದಗ ಮತ್ತು ಮುಂಡರಗಿ ತಾಲೂಕುಗಳಲ್ಲಿ ಕಾರ್ಯನಿರ್ವಹಿಸುತ್ತಿರುವ ಡಾ॥ ಎ.ಪಿ.ಜೆ. ಅಬ್ದುಲ್ ಕಲಾಂ ವಸತಿ ಶಾಲೆ ಹಾಗೂ ಅಲ್ಪಸಂಖ್ಯಾತರ ಮೊರಾರ್ಜಿ ದೇಸಾಯಿ ವಸತಿ ಶಾಲೆಗಳಿಗೆ 2024-25ನೇ ಸಾಲಿಗೆ 6ನೇ ತರಗತಿ ದಾಖಲಾತಿಗಾಗಿ ಅರ್ಜಿಗಳನ್ನು ಆಹ್ವಾನಿಸಲಾಗಿದ್ದು, ಇದರಲ್ಲಿ 75% ರಷ್ಟು ಅಲ್ಪಸಂಖ್ಯಾತರ ವಿದ್ಯಾರ್ಥಿಗಳಿಗೆ ಹಾಗೂ 25%ರಷ್ಟು ಇತರೇ ವರ್ಗದವರಿಗೆ ವಿತರಿಸಲಾಗುವುದು.

ಅಂಗವಿಕಲ ವಿದ್ಯಾರ್ಥಿಗಳು, ವಿಶೇಷ ಗುಂಪಿಗೆ ಸೇರಿದ ಅಂದರೆ ಅನಾಥ ಮಕ್ಕಳು, ವಿಧವೆಯರ ಮಕ್ಕಳು, ಪೌರ ಕಾರ್ಮಿಕರ ಮಕ್ಕಳು ಇತ್ಯಾದಿಗಳಿಗೆ 3% ರಷ್ಟು ಆಸನಗಳನ್ನು ಕಾಯ್ದಿರಿಸಲಾಗಿದೆ.

6ನೇ ತರಗತಿಗೆ ದಾಖಲಾತಿ ಬಯಸುವ ವಿದ್ಯಾರ್ಥಿಗಳು 5ನೇ ತರಗತಿಯಲ್ಲಿ ಉತ್ತೀರ್ಣರಾಗಿರಬೇಕು ಹಾಗೂ ಕುಟುಂಬದ ವಾರ್ಷಿಕ ಆದಾಯ ರೂ. 2.50 ಲಕ್ಷ ಮೀರಿರಬಾರದು, ಅರ್ಜಿಗಳನ್ನು ಆನ್‌ಲೈನ್ https://sevasindhu.karnataka.gov.in (ಸೇವಾ ಸಿಂಧೂ) ಮೂಲಕ ಅರ್ಜಿ ಸಲ್ಲಿಸುವ ದಿನಾಂಕವನ್ನು ಮಾರ್ಚ್ 31ರವರೆಗೆ ವಿಸ್ತರಿಸಲಾಗಿದೆ. ಹೆಚ್ಚಿನ ಮಾಹಿತಿಗಾಗಿ ಜಿಲ್ಲಾ ಅಧಿಕಾರಿಗಳು, ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆ, ಗದಗ ಹಾಗೂ 08371-262911 ತಾಲೂಕ ಪಂಚಾಯತಿ ಆವರಣ, ಮುಂಡರಗಿ. : 08372-297494 ಮೌಲಾನಾ ಆಜಾದ್ ಭವನ ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆ, ಗದಗ.: 08381-267258 ತಾಲೂಕ ಪಂಚಾಯತಿ ಆವರಣ, ರೋಣ: 08377-245411 ತಹಸೀಲ್ದಾರ ಕಾರ್ಯಾಲಯ ರೂ.ನಂ:20, ನರಗುಂದ; 08487-242810 ತಾಲೂಕ ಪಂಚಾಯತ್ ಹತ್ತಿರ, ಶಿರಹಟ್ಟಿ. ಈ ಅಲ್ಪಸಂಖ್ಯಾತರ ಮಾಹಿತಿ ಕೇಂದ್ರಗಳಲ್ಲಿ ಹೆಚ್ಚಿನ ಮಾಹಿತಿಯನ್ನು ಪಡೆಯಬಹುದಾಗಿದೆ.

### ಮುಗುಳಿಯಲ್ಲಿ ನೂತನ ಪ್ರೌಢಶಾಲೆ ನಿರ್ಮಾಣಕ್ಕೆ ಭೂಮಿಪೂಜೆ ನೆರವೇರಿಸಿದ ಶಾಸಕ ಜಿ.ಎಸ್. ಪಾಟೀಲ

# ಗ್ರಾಮದ ಸಮಗ್ರ ಅಭಿವೃದ್ಧಿಗೆ ಬದ್ಧ

■ ವಿಜಯಸಾಕ್ಷಿ ಸುದ್ದಿ, ರೋಣ

ಮುಗುಳಿ ಗ್ರಾಮದಲ್ಲಿ 1 ಕೋಟಿ 60 ಲಕ್ಷ ರೂ. ವೆಚ್ಚದಲ್ಲಿ ಪ್ರೌಢಶಾಲೆಯ 10 ಕೊಠಡಿಗಳನ್ನು ನಿರ್ಮಿಸಲಾಗುವುದು ಎಂದು ಶಾಸಕ, ರಾಜ್ಯ ಖನಿಜ ನಿಗಮದ ಅಧ್ಯಕ್ಷ ಜಿ.ಎಸ್. ಪಾಟೀಲ ಹೇಳಿದರು.

ಅವರು ಬುಧವಾರ ತಾಲೂಕಿನ ಮುಗುಳಿ ಗ್ರಾಮದಲ್ಲಿ ನೂತನ ಪ್ರೌಢಶಾಲೆಯ ಶಾಲಾ ಕೊಠಡಿ ನಿರ್ಮಾಣಕ್ಕೆ ಭೂಮಿ ಪೂಜೆ ನೆರವೇರಿಸಿ ಮಾತನಾಡಿದರು.

ಮತಕ್ಷೇತ್ರದಲ್ಲಿ ಮಕ್ಕಳು ಅಕ್ಷರ ಜ್ಞಾನದಿಂದ ವಂಚಿತರಾಗಬಾರದು ಎಂಬ ಉದ್ದೇಶದಿಂದ ಶಾಲಾ ಕೊಠಡಿಗಳ ನಿರ್ಮಾಣಕ್ಕೆ ಪ್ರಮುಖ ಆದ್ಯತೆ ನೀಡಲಾಗುತ್ತಿದೆ. ಸರಕಾರ ಶೈಕ್ಷಣಿಕ ಪ್ರಗತಿಗೆ ಅನೇಕ ಮಹತ್ತರವಾದ ಯೋಜನೆಗಳನ್ನು ಜಾರಿಗೆ ತರುವ ಮೂಲಕ ಬಡ ಮಕ್ಕಳ ಶಿಕ್ಷಣಕ್ಕೆ ನೆರವು ನೀಡುತ್ತಿದೆ. ಆದ್ದರಿಂದ ಪಾಲಕರು ಮಕ್ಕಳ ಶಿಕ್ಷಣಕ್ಕೆ ಮೊದಲ ಆದ್ಯತೆ ನೀಡಬೇಕು. ಗ್ರಾಮದ ಅನೇಕ ಕಡೆಗಳಲ್ಲಿ ಸಿಸಿ ರಸ್ತೆಯನ್ನು ನಿರ್ಮಿಸಬೇಕು ಎಂಬುದು



ಗ್ರಾಮಸ್ಥರ ಇಚ್ಛೆಯಾಗಿತ್ತು. ಹೀಗಾಗಿ ಗ್ರಾಮದಲ್ಲಿ ಸಿಸಿ ರಸ್ತೆಗಳನ್ನು ನಿರ್ಮಿಸಲು 50 ಲಕ್ಷ ರೂ.ಗಳ ಅನುದಾನ ಮಂಜೂರಾಗಿದ್ದು, ಶೀಘ್ರವೇ ಕಾಮಗಾರಿಗೆ ಚಾಲನೆ ನೀಡಲಾಗುವುದು. ಜೊತೆಗೆ ಡಾ. ಬಿ.ಆರ್. ಅಂಬೇಡ್ಕರ ನಗರದಲ್ಲಿ 20 ಲಕ್ಷ ರೂ.ಗಳ ವೆಚ್ಚದಲ್ಲಿ ಸಮುದಾಯ ಭವನ ನಿರ್ಮಿಸಲು ಅನುದಾನವನ್ನು ನೀಡಲಾಗುತ್ತಿದ್ದು, ಮುಗುಳಿ ಗ್ರಾಮದ ಸಮಗ್ರ ಅಭಿವೃದ್ಧಿಗೆ ಶ್ರಮಿಸಲಾಗುವುದು ಎಂದರು.

ಇದೇ ಸಂಧರ್ಭದಲ್ಲಿ ಶಾಸಕ ಜಿ.ಎಸ್. ಪಾಟೀಲ ಹಾಗೂ ಪ್ರೌಢಶಾಲಾ ನಿರ್ಮಾಣಕ್ಕೆ ಭೂದಾನ ಮಾಡಿದ ಗುರುಬಸಮ್ಮ ಹಿರೇಮಠರವರನ್ನು ಗ್ರಾಮಸ್ಥರು ಸನ್ಮಾನಿಸಿದರು. ಗ್ರಾ.ಪಂ ಅಧ್ಯಕ್ಷೆ ಭೀಮವ್ವ ಗುಳಗುಳಿ ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿದ್ದರು.

ಡಿಡಿಪಿಐ ಎಂ.ಎಸ್. ರಡ್ಡೇರ, ತಾ.ಪಂ ಇಒ ರವಿ ಎ.ಎನ್., ಬಿಇಒ ರುದ್ರಪ್ಪ ಹುರಳಿ, ಪಿ.ಬಿ. ಅಳಗವಾಡಿ, ಬಸವರಾಜ ನವಲಗುಂದ, ವ್ಹಿ.ಬಿ. ಸೋಮನಕಟ್ಟಿಮಠ, ಎಂ.ಎಸ್. ದೇಸಾಯಿ, ಕಾರ್ಯನಿರ್ವಾಹಕ ಅಧಿಕಾರಿ ಬಲರಾಮ್ ನಾಯಕ, ಎಂ.ಎ. ಫಣಿಬಂದ್ ಸೇರಿದಂತೆ ಎಸ್‌ಡಿಎಂಸಿ ಅಧ್ಯಕ್ಷರು, ಸದಸ್ಯರು, ಮುಖಂಡರು ಪಾಲ್ಗೊಂಡಿದ್ದರು.

> ರೋಣ ಮತಕ್ಷೇತ್ರ ಸೇರಿದಂತೆ ಜಿಲ್ಲೆಯ ಮಕ್ಕಳು ಅಕ್ಷರ ಜ್ಞಾನದಿಂದ ದೂರ ಉಳಿಯಬಾರದು. ಗ್ರಾಮೀಣ ಭಾಗಗಳ ಮಕ್ಕಳು ಉನ್ನತ ವ್ಯಾಸಾಂಗವನ್ನು ಪಡೆಯಬೇಕು ಎಂಬ ಉದ್ದೇಶದಿಂದ ಸರಕಾರ 25 ಹೊಸ ಪ್ರೌಢಶಾಲೆಗಳ ನಿರ್ಮಾಣಕ್ಕೆ ಅನುಮತಿ ನೀಡಿದೆ. ಕ್ಷೇತ್ರದ ಅನೇಕ ಗ್ರಾಮಗಳಲ್ಲಿ ಪ್ರೌಢಶಾಲೆಗಳನ್ನು ಆರಂಭಿಸಲು ಅಗತ್ಯ ಕ್ರಮ ತೆಗೆದುಕೊಳ್ಳಲಾಗುವುದು.
>
> – ಜಿ.ಎಸ್. ಪಾಟೀಲ.
> ಶಾಸಕರು, ರೋಣ.

### ಜಿಮ್ಸ್‌ನಲ್ಲಿ ಸಿಟಿ ಸ್ಕ್ಯಾನ್ ಉದ್ಘಾಟಿಸಿ ವಿದ್ಯಾರ್ಥಿಗಳಿಗೆ ಕಂಪ್ಯೂಟರ್ ಟ್ಯಾಬ್ ವಿತರಿಸಿದ ಸಚಿವ ಎಚ್.ಕೆ.ಪಾಟೀಲ

## ಉತ್ತಮ ಶಿಕ್ಷಣ ಪಡೆದು ಉನ್ನತ ಸ್ಥಾನ ಅಲಂಕರಿಸಿ



■ ವಿಜಯಸಾಕ್ಷಿ ಸುದ್ದಿ, ಗದಗ

ಜಿಮ್ಸ್ ಸಂಸ್ಥೆಯಲ್ಲಿ ವಿದ್ಯಾರ್ಥಿಗಳು ಉತ್ತಮ ಶಿಕ್ಷಣ ಪಡೆದು ಉನ್ನತ ಹುದ್ದೆಗಳನ್ನು ಅಲಂಕರಿಸಿ ಸಮಾಜ ಸೇವೆಯಲ್ಲಿ ತಮ್ಮನ್ನು ತಾವು ಸಕ್ರಿಯಾವಗಿ ತೊಡಗಿಸಿಕೊಳ್ಳಬೇಕು ಎಂದು ಕಾನೂನು ಹಾಗೂ ಪ್ರವಾಸೋದ್ಯಮ ಖಾತೆ ಸಚಿವ ಎಚ್.ಕೆ.ಪಾಟೀಲ ಹೇಳಿದರು.

ಅವರು, ಗದಗ ವೈದ್ಯಕೀಯ ವಿದ್ಯಾಲಯ ಸಂಸ್ಥೆ ಆವರಣದಲ್ಲಿ ನೂತನ ಸಿಟಿ ಸ್ಕ್ಯಾನ್ ಹಾಗೂ ವಿದ್ಯಾರ್ಥಿಗಳಿಗೆ ನೂತನ ಬಸ್ ಚಾಲನೆ ಮತ್ತು ಎಸ್.ಸಿ.ಪಿ / ಟಿ.ಎಸ್.ಪಿ ಯೋಜನೆಯಡಿ ಆಯ್ಕೆಯಾದ ಫಲಾನುಭವಿ ವಿದ್ಯಾರ್ಥಿಗಳಿಗೆ ಕಂಪ್ಯೂಟರ್ ಟ್ಯಾಬ್‌ಗಳನ್ನು ವಿತರಿಸಿ ಮಾತನಾಡಿದರು.

ಜಿಮ್ಸ್ ನಲ್ಲಿ ಉತ್ತಮ ಶಿಕ್ಷಣ ಲಭ್ಯವಿದ್ದು, ವಿದ್ಯಾರ್ಥಿಗಳು ಹೆಚ್ಚು ಅಂಕ ಗಳಿಸಿ ಸಂಸ್ಥೆಗೆ ಕೀರ್ತಿ ತಂದಿದ್ದಾರೆ ಎಂದರು.

ಗದಗ ವೈದ್ಯಕೀಯ ಶಿಕ್ಷಣ ಸಂಸ್ಥೆಗೆ ಅಗತ್ಯವಿರುವ ಎಲ್ಲ ಸೌಲಭ್ಯಗಳನ್ನು ನೀಡಲು ಸರ್ಕಾರ ಸದಾ ಸಿದ್ಧವಿದ್ದು, ಆಸ್ಪತ್ರೆಗಳಲ್ಲಿ ಆಗಮಿಸುವ ಜನಸಾಮಾನ್ಯರಿಗೆ ಉತ್ತಮ ಚಿಕಿತ್ಸೆ ನೀಡುವುದು ಇಲ್ಲಿನ ಅಧಿಕಾರಿಗಳ, ನೌಕರರ ಆದ್ಯ ಕರ್ತವ್ಯವಾಗಬೇಕೆಂದು ಸಚಿವ ಪಾಟೀಲ ಹೇಳಿದರು.

ಕಾರ್ಯಕ್ರಮದಲ್ಲಿ ವಿಧಾನ ಪರಿಷತ್ ಸದಸ್ಯ ಎಸ್.ವಿ. ಸಂಕನೂರ, ಮಾಜಿ ಶಾಸಕ ಡಿ.ಆರ್.ಪಾಟೀಲ, ಗಣ್ಯರಾದ ಗುರಣ್ಣ ಬಳಗಾನೂರ, ಪ್ರಭು ಬುರಬುರೆ, ಎಸ್ ಎನ್.ಬಳ್ಳಾರಿ, ಡಾ. ನಾಗನೂರ, ಗದಗ ವೈದ್ಯಕೀಯ ಶಿಕ್ಷಣ ಸಂಸ್ಥೆಗಳ ನಿರ್ದೇಶಕ ಡಾ.ಬಸವರಾಜ ಬೊಮ್ಮನಹಳ್ಳಿ, ಜಿಲ್ಲಾ ಶಸ್ತ್ರ ಚಿಕಿತ್ಸಕ ಡಾ.ಬಿ.ಸಿ.ಕರಿಗೌಡರ ಸೇರಿದಂತೆ ಇತರರು ಇದ್ದರು.

### ಮೃಗಾಲಯದಲ್ಲಿನ ಪ್ರಾಣಿ ಮನೆ, ಆವರಣ ಉದ್ಘಾಟಿಸಿದ ಸಚಿವ ಎಚ್.ಕೆ. ಪಾಟೀಲ

## ಗದಗ ಮೃಗಾಲಯದಲ್ಲಿ ನೈಟ್ ಸಫಾರಿ ಆರಂಭವಾಗಲಿ

■ ವಿಜಯಸಾಕ್ಷಿ ಸುದ್ದಿ, ಗದಗ

ಗದಗ ಮೃಗಾಲಯದಲ್ಲಿ ನೈಟ್ ಸಫಾರಿ ಆರಂಭ ಮಾಡುವ ಮೂಲಕ ದೇಶದಲ್ಲಿಯೇ ಅತ್ಯಂತ ಆಕರ್ಷಣೆಯ ಮೃಗಾಲಯವಾಗಬೇಕು. ಈ ನಿಟ್ಟಿನಲ್ಲಿ ಅಧಿಕಾರಿ ವರ್ಗ ಕಾರ್ಯೋನ್ಮುಖವಾಗಬೇಕೆಂದು ಕಾನೂನು, ನ್ಯಾಯ ಮತ್ತು ಮಾನವ ಹಕ್ಕುಗಳು, ಸಂಸದೀಯ ವ್ಯವಹಾರಗಳು, ಶಾಸನ ರಚನೆ ಮತ್ತು ಪ್ರವಾಸೋದ್ಯಮ ಇಲಾಖೆ ಹಾಗೂ ಗದಗ ಜಿಲ್ಲಾ ಉಸ್ತುವಾರಿ ಸಚಿವ ಡಾ.ಎಚ್.ಕೆ. ಪಾಟೀಲ ಹೇಳಿದರು.

ನಗರದ ಮೃಗಾಲಯದಲ್ಲಿ ಬುಧವಾರ ಕರ್ನಾಟಕ ಅರಣ್ಯ ಇಲಾಖೆ ಹಾಗೂ ಕರ್ನಾಟಕ ಮೃಗಾಲಯ ಪ್ರಾಧಿಕಾರಗಳ ಸಹಯೋಗದಲ್ಲಿ ನಿರ್ಮಿಸಿರುವ ಗುಳ್ಳೆನರಿ, ಬಂಗಾಳಿ ನರಿ ಹಾಗೂ ಕೆನ್ನಾಯಿ ಪ್ರಾಣಿ ಮನೆ ಹಾಗೂ ಆವರಣ ಮತ್ತು ಮಾಗಡಿ ಕೆರೆ ರಾಮ್ಸಾರ್ ಸೈಟ್ ಕೈಪಿಡಿಯನ್ನು ಬಿಡುಗಡೆಗೊಳಿಸಿ ಮಾತನಾಡಿದ ಅವರು, ಈಗಾಗಲೇ ಮೃಗಾಲಯದಲ್ಲಿ ಶೇ.70ರಷ್ಟು ಪ್ರಾಣಿಗಳಿದ್ದು, ಇನ್ನುಳಿದ ಪ್ರಾಣಿಗಳನ್ನು ಶೀಘ್ರವೇ ತರಲಾಗುವುದು ಎಂದು ಹೇಳಿದರು.



2025 ಮಾರ್ಚ್ 16ರಂದು ಕೆ.ಎಚ್. ಪಾಟೀಲ ಜನ್ಮಶತಾಬ್ಧಿ ವರ್ಷಕ್ಕೆ ರಚನಾತ್ಮಕ ಕೆಲಸ ಕೈಗೊಂಡು ಮೃಗಾಲಯಕ್ಕೆ ನೈಟ್ ಸಫಾರಿ ಕಲ್ಪಿಸುವ ಮೂಲಕ ದೇಶದಲ್ಲಿಯೇ ಅತ್ಯಂತ ಆಕರ್ಷಣೆಯ ಮೃಗಾಲಯ ನಿರ್ಮಿಸಲು ಅಧಿಕಾರಿಗಳಿಗೆ ಸೂಚಿಸಿ, ಅದಕ್ಕೆ ಅಗತ್ಯವಿರುವ ಸಂಪೂರ್ಣ ಸಹಕಾರ ಮತ್ತು ಬೆಂಬಲ ನೀಡಲಾಗುವುದು ಎಂದು ಹೇಳಿದರು.

ಉಪ ಅರಣ್ಯ ಸಂರಕ್ಷಣಾಧಿಕಾರಿ ಲೇಖರಾಜ ಮೀನಾ ಅತಿಥಿಗಳನ್ನು ಸ್ವಾಗತಿಸಿ ಪ್ರಾಸ್ತಾವಿಕವಾಗಿ ಮಾತನಾಡಿದರು. ಕಾರ್ಯಕ್ರಮದಲ್ಲಿ ಮೈಸೂರಿನ ಕರ್ನಾಟಕ ಮೃಗಾಲಯ ಪ್ರಾಧಿಕಾರದ ಸದಸ್ಯ ಕಾರ್ಯದರ್ಶಿ ಸುನೀಲ್ ಪನ್ವಾರ, ಜಿಲ್ಲಾಧಿಕಾರಿ ವೈಶಾಲಿ ಎಂ.ಎಲ್, ಡಾ. ಎಚ್.ಎನ್. ನಾಗನೂರ, ರವಿ ಮೂಲಿಮನಿ, ಪ್ರಭು ಬುರಬುರೆ, ಎಸ್. ಎನ್. ಬಳ್ಳಾರಿ, ಎಂ.ಆರ್. ಪಾಟೀಲ, ಶಶಿಕಲಾ ಹೊಸಮನಿ ಸೇರಿದಂತೆ ಮತ್ತಿತರರು ಹಾಜರಿದ್ದರು.

> ಮಾಗಡಿ ಕೆರೆಯು ಯುನೆಸ್ಕೋ ಗುರುತಿಸುವ ರಾಮ್ಸಾರ್ ಸೈಟ್‌ಗೆ ಸೇರ್ಪಡೆಯಾಗಿ ಜಾಗತಿಕ ಮಟ್ಟದಲ್ಲಿ ಮನ್ನಣೆ ಪಡೆದಿದೆ. ಸಹಕಾರಿ ಧುರೀಣ ಕೆ.ಎಚ್. ಪಾಟೀಲ ಅವರು ಕಂಡ ಕನಸಿನಂತೆ ಗದಗ ಮೃಗಾಲಯ ಆರಂಭವಾಗಿದೆ. ಅವರ ಆಶಯದಂತೆ ಮೃಗಾಲಯ ಸರಿಯಾಗಿ ನಡೆಯಬೇಕು. ಗದಗ ಮೃಗಾಲಯಕ್ಕೆ ಹೆಚ್ಚುವರಿಯಾಗಿ 13 ಎಕರೆ ಜಮೀನು ಜೊತೆಗೆ ಒಟ್ಟು 15 ಎಕರೆ ಶೀಘ್ರದಲ್ಲೇ ಸೇರ್ಪಡೆಯಾಗಲಿದೆ ಎಂದು ಸಚಿವ ಎಚ್. ಕೆ. ಪಾಟೀಲ ತಿಳಿಸಿದರು.

## ಸಂಪಾದಕೀಯ

# ಗಟ್ಟಿ ನಿರ್ಧಾರ ತಳೆದ ಬಿಜೆಪಿ

ಕೇಂದ್ರದಲ್ಲಿ ಮತ್ತೊಮ್ಮೆ ಅಧಿಕಾರಕ್ಕೆ ಬರುವ ಸಂಕಲ್ಪದೊಂದಿಗೆ ಈ ಬಾರಿಯ ಲೋಕಸಭೆ ಚುನಾವಣೆಯನ್ನು ಬಿಜೆಪಿ ಗಂಭೀರವಾಗಿ ಪರಿಗಣಿಸಿದೆ. ಕಾಂಗ್ರೆಸ್ ತನ್ನ ಮೊದಲ ಪಟ್ಟಿ ಬಿಡುಗಡೆ ಮಾಡಿದ ಬೆನ್ನಲ್ಲೇ, ಬಿಜೆಪಿಯು 20 ಕ್ಷೇತ್ರಗಳ ಅಭ್ಯರ್ಥಿಗಳ ಹೆಸರನ್ನು ಅಂತಿಮಗೊಳಿಸಿದೆ.

ಗೆಲುವು ಒಂದೇ ಚುನಾವಣೆಯ ಮಾನದಂಡ ಆಗಿರುವ ಕಾಲದಲ್ಲಿ ಬಿಜೆಪಿ ಕೆಲ ಬದಲಾವಣೆಗೆ ಕೈ ಹಾಕಿದೆ. ಹಾಲಿ 9 ಸಂಸದರಿಗೆ ಶಾಕ್ ನೀಡಿ ಹೊಸಬರಿಗೆ ಮಣೆ ಹಾಕುವ ಮೂಲಕ ಬಿಜೆಪಿ ದಿಟ್ಟ ನಿಲುವು ತೆಗೆದುಕೊಂಡಿದೆ.

ಮುಖ್ಯವಾಗಿ ಬಿಜೆಪಿಯ ಮಾಜಿ ರಾಜ್ಯಾಧ್ಯಕ್ಷ ನಳಿನ್ ಕುಮಾರ್ ಕಟೀಲ್, ಮೈಸೂರು ಸಂಸದ ಪ್ರತಾಪ್ ಸಿಂಹ, ಸದಾನಂದ ಗೌಡ ಹಾಗೂ ಚಿಕ್ಕಮಗಳೂರು ಸಂಸದೆ ಶೋಭಾ ಕರಂದ್ಲಾಜೆಗೆ ಟಿಕೆಟ್ ನಿರಾಕರಿಸುವಂಥ ಬಿಜೆಪಿಯ ಎದೆಗಾರಿಕೆಯನ್ನ ಮೆಚ್ಚಲೇಬೇಕು.

ಬಿಜೆಪಿಯ ಈ ನಿರ್ಧಾರದಿಂದ ಒಂದೆರಡು ಸ್ಥಾನಗಳನ್ನ ಕಳೆದುಕೊಳ್ಳಬಹುದು. ಆದರೆ ಕೆಲಸ ಮಾಡದ ಸಂಸದರು ಬೇಕಾಗಿಲ್ಲ ಎನ್ನುವ ಸಂದೇಶವನ್ನು ಬಿಜೆಪಿ ಹೈಕಮಾಂಡ್ ನೀಡಿದೆ. ಟಿಕೆಟ್ ಕೊಟ್ಟವರ ಪೈಕಿ ಎಲ್ಲರೂ ಯೋಗ್ಯ ಅಭ್ಯರ್ಥಿಗಳೇ ಎಂದೇನಿಲ್ಲ. ಆದರೆ ಅಲ್ಲಿ ಪರ್ಯಾಯ ನಾಯಕತ್ವ ಕೊರತೆ ಕಾರಣಕ್ಕೆ ಕೆಲ ಕ್ಷೇತ್ರಗಳಲ್ಲಿ ಹಳಬರಿಗೆ ಮಣೆ ಹಾಕಲಾಗಿದೆ.

ಟಿಕೆಟ್ ವಂಚಿತರ ಪೈಕಿ ಪ್ರತಾಪ್ ಸಿಂಹ ಹೊರತುಪಡಿಸಿದರೆ ಇನ್ನುಳಿದವರ ಸಾಧನೆ ಅತ್ಯಂತ ಕಳಪೆ. ಹೀಗಾಗಿ ಅಂಥವರನ್ನು ಮುಲಾಜಿಲ್ಲದೇ ಬದಲಾಯಿಸುವ ಕೆಲಸ ಬಿಜೆಪಿಯಲ್ಲಿ ನಡೆದಿದೆ. ಮೂರೂ ಕ್ಷೇತ್ರಗಳನ್ನ ಜೆಡಿಎಸ್ ಅಭ್ಯರ್ಥಿಗಳಿಗೆ ಬಿಟ್ಟುಕೊಟ್ಟು ಇನ್ನುಳಿದ ಕ್ಷೇತ್ರಗಳಿಗೆ ಮತ್ತೆ ಹೊಸಬರಿಗೆ ಮಣೆಹಾಕುವ ಸೂಚನೆಯನ್ನ ಬಿಜೆಪಿ ನೀಡಿದೆ. ಇತ್ತೀಚಿನ ವರ್ಷಗಳಲ್ಲಿ ಬಿಜೆಪಿ ಇಂಥದ್ದೊಂದು ನಿರ್ಣಯ ಕೈಗೊಂಡಿದ್ದು ಇದೇ ಮೊದಲು.

## ಜಿಲ್ಲಾ ಅಲ್ಪಸಂಖ್ಯಾತರ, ಅಲ್ಪಸಂಖ್ಯಾತ ಅಂಗವಿಕಲರ ಕ್ಷೇಮಾಭಿವೃದ್ಧಿ ಟ್ರಸ್ಟ್‌ನ ವಾರ್ಷಿಕೋತ್ಸವ

# ಬದುಕಲು ಎಲ್ಲರಿಗೂ ಸಮಾನ ಅವಕಾಶವಿದೆ

■ವಿಜಯಸಾಕ್ಷಿ ಸುದ್ದಿ, ಗದಗ

ವಿಶೇಷಚೇತನರಿಗೆ ಅಗತ್ಯವಿರುವ ಶಿಕ್ಷಣ, ಆರೋಗ್ಯ, ಕೌಶಲ್ಯ ತರಬೇತಿ ಮತ್ತು ಉದ್ಯೋಗ ನೀಡುವುದರೊಂದಿಗೆ ಅವರಲ್ಲಿರುವ ನ್ಯೂನತೆ ಪರಿಗಣಿಸದೆ ಅವರಲ್ಲಿರುವ ಸಾಮರ್ಥ್ಯ ಗುರುತಿಸಿ, ಪ್ರೋತ್ಸಾಹಿಸಿ ಅವರಲ್ಲಿ ನಂಬಿಕೆ, ಆತ್ಮ ವಿಶ್ವಾಸ ಮೂಡಿಸುವ ಮೂಲಕ ಸಮಾಜ ಮುಖ್ಯ ವಾಹಿನಿಗೆ ತರುತ್ತಿರುವುದು ಶ್ಲಾಘನೀಯ ಎಂದು ಪೂಜ್ಯ ಮ.ನಿ.ಪ್ರ. ಶ್ರೀ ಶಾಂತಲಿಂಗ ಮಹಾಸ್ವಾಮಿಗಳು ನುಡಿದರು.

ನಗರದ ಕರ್ನಾಟಕ ಭವನದಲ್ಲಿ ನಡೆದ ಗದಗ ಜಿಲ್ಲಾ ಅಲ್ಪಸಂಖ್ಯಾತರ ಹಾಗೂ ಅಲ್ಪಸಂಖ್ಯಾತ ಅಂಗವಿಕಲರ ಕ್ಷೇಮಾಭಿವೃದ್ಧಿ ಟ್ರಸ್ಟ್‌ನ 5ನೇ ವರ್ಷದ ವಾರ್ಷಿಕೋತ್ಸವ ನಿಮಿತ್ತ ವಿಶೇಷಚೇತನರ ಅಭಿವೃದ್ಧಿಗಾಗಿ ವಿಶ್ವ ಕಲ್ಯಾಣ ಸಂಸ್ಥೆಗೆ ಧನ ಸಹಾಯ, ವೀಲ್ ಚೇರ್ ವಿತರಣೆ, ವಿಶೇಷಚೇತನರ ಸಮ್ಮೇಳನ ಹಾಗೂ ಸನ್ಮಾನ ಕಾರ್ಯಕ್ರಮದ ದಿವ್ಯ ಸಾನಿಧ್ಯ ವಹಿಸಿ ಅವರು ಮಾತನಾಡಿದರು.

ಹಾಜಿ ಅಬ್ದುಲಖಾದರ ಸನ್ನುಬಾಯಿ, ಫಾದರ್ ಎ.ಎಸ್. ಪ್ರವೀಣಕುಮಾರ ಮಾತನಾಡಿ, ಸಮಾಜದಲ್ಲಿ ಬದುಕಲು ಎಲ್ಲರೂ ಸಮಾನ ಅವಕಾಶವನ್ನು ಹೊಂದಿದ್ದಾರೆ. ಇವರ ಸೇವೆ ಮಾಡುವುದರ ಮೂಲಕ ನಮ್ಮಲ್ಲಿರುವ ಪಾಪ ಕರ್ಮಾದಿಗಳನ್ನು ಕಳೆದುಕೊಳ್ಳಲು ಸಾಧ್ಯವೆಂದರು.



ಜಿಲ್ಲಾ ಅಂಗವಿಕಲರ ಕಲ್ಯಾಣಾಧಿಕಾರಿ ಕೆ.ಮಾಹಾಂತೇಶ, ಜಿಲ್ಲಾ ವಕ್ಫ್ ಸಲಹಾ ಸಮಿತಿ ಅಧ್ಯಕ್ಷ ಜಿ.ಎಮ್. ದಂಡಿನ, ಅಂಜುಮನ್ ಇಸ್ಲಾಂ ಪಾಲಿಟೆಕ್ನಿಕ್ ಅಧ್ಯಕ್ಷ ಜಾಕೀರ ಹುಸೇನ ಎ.ಮುಜಾವರ, ಬಸವದಳದ ಅಧ್ಯಕ್ಷ ವಿ.ಕೆ. ಕರಿಗೌಡರ, ಲಿಂಗಾಯತ ಮಹಾಸಭಾ ಕಾರ್ಯದರ್ಶಿ ಶೇಖಣ್ಣ ಕವಳಿಕಾಯಿ, ಗಿರಿಧರಸಿಂಗ್ ಬ್ಯಾಳಿ, ವಿರೋಧ ಪಕ್ಷದ ಉಪನಾಯಕ ಬರಕತಅಲಿ ಮುಲ್ಲಾ, ಮಾಜಿ ಅಧ್ಯಕ್ಷೆ ರುದ್ರಮ್ಮ ಕೆರಕಲಮಟ್ಟಿ, ಅಂಜುಮನ್ ಇಸ್ಲಾಂ ಕಮಿಟಿ ಮಾಜಿ ಅಧ್ಯಕ್ಷ ಅಕ್ಷರಸಾಬ ಬರ್ಬಚಿ, ಲೆಕ್ಕ ಪರಿಶೋಧಕ ಕೆ.ಎಸ್. ಚೆಟ್ಟಿ ಮಾತನಾಡಿದರು.

ಗಿರಿಧರಸಿಂಗ್ ಬ್ಯಾಳಿ, ಬಸಬಣ್ಣೆಪ್ಪ ಚಿಂಚಲಿ ವಿಶ್ವ ಕಲ್ಯಾಣ ಸಂಸ್ಥೆಗೆ 5001 ರೂ ದೇಣಿಗೆ ನೀಡಿದರು, ಚನ್ನಪ್ಪ ಸತ್ಯಪ್ಪನವರ 2001 ರೂ ದೇಣಿಗೆ ನೀಡಿದರು.

ಅಧ್ಯಕ್ಷತೆ ವಹಿಸಿದ್ದ ಟ್ರಸ್ಟ್ ಅಧ್ಯಕ್ಷ ಎಮ್.ಸಿ. ಶೇಖ ಮಾತನಾಡಿ, ನಮ್ಮ ಟ್ರಸ್ಟ್ ವತಿಯಿಂದ ಧನ ಸಹಾಯ, ವೀಲ್ ಚೇರ್, ಹಾಗೂ ಸಾಧನ ಸಲಕರಣೆಗಳನ್ನು ನೀಡುತ್ತಿದ್ದೇವೆ. ಮುಂಬರುವ ದಿನಗಳಲ್ಲಿ ಈ ಸಂಸ್ಥೆಗೆ ಇನ್ನೂ ಹೆಚ್ಚಿನ ರೀತಿಯಲ್ಲಿ ಸಹಾಯ ಸಹಕಾರ ನೀಡುತ್ತೇವೆಂದು ಹೇಳಿದರು.

ನಗರಾಭಿವೃದ್ಧಿ ಪ್ರಾಧಿಕಾರದ ಮಾಜಿ ಅಧ್ಯಕ್ಷ ಗುರಣ್ಣ ಬಳಗಾನೂರ ಮಾತನಾಡಿ, ವಾರ್ಷಿಕೋತ್ಸವದ ನಿಮಿತ್ತ ಎಮ್.ಸಿ. ಶೇಖರು ವಿಶೇಷಚೇತನರ ಅಭಿವೃದ್ಧಿಗಾಗಿ ವಿಶ್ವ ಕಲ್ಯಾಣ ಸಂಸ್ಥೆಗೆ ಧನ ಸಹಾಯ, ಸಾಧನ ಸಲಕರಣೆಗಳನ್ನು ನೀಡುತ್ತಿರುವುದು ಶ್ಲಾಘನೀಯ. ಶೀಘ್ರದಲ್ಲಿ ಸಚಿವರ ಗಮನಕ್ಕೆ ತಂದು ಸಂಸ್ಥೆಗೆ ಶಾಲಾ ವಾಹನವನ್ನು ಕೊಡಿಸುವುದಾಗಿ ಹೇಳಿದರು.

ಜಿಲ್ಲಾ ಸತ್ರ ನ್ಯಾಯಾಲಯದ ನ್ಯಾಯವಾದಿ ಎಮ್.ಎಮ್. ಕೂಕನೂರ, ಜಿಲ್ಲಾ ವಕ್ಫ್ ಸಲಹಾ ಸಮಿತಿಯ ಅಧ್ಯಕ್ಷ ಜಿ.ಎಮ್. ದಂಡಿನರನ್ನು ವಿಶ್ವ ಕಲ್ಯಾಣ ಸಂಸ್ಥೆಯ ಅಧ್ಯಕ್ಷ ಮಂಜುನಾಥ ಹದ್ದಣ್ಣವರ ಸನ್ಮಾನಿಸಿದರು.

ಕಾರ್ಯಕ್ರಮದಲ್ಲಿ ಅಸ್ಲಂ ನೇರೆಗಲ್ಲ, ವಿಘೂಲ್ ಲುಧಿಯಾ, ಜಗದೀಶ ಬಿದರೂರ, ಮಂಜುನಾಥ ಆಸಂಗಿ, ಫಾರೂಖ ಹುಬ್ಬಳ್ಳಿ, ವಿರೇಶ ಭಂಗಿ, ಸುರೇಶ ಲಮಾಣಿ, ಅರುಣ ಕರಡಿ, ನೀಲಪ್ಪ ಕಟಗಿ, ಭಿಮಪ್ಪ ಹದ್ದಣ್ಣವರು, ಪಾರ್ವತಿ ಎಸ್.ಎಚ್ ಮುಂತಾದವರು ಉಪಸ್ಥಿತರಿದ್ದರು. ಎಸ್.ಎ. ಟೋಪಿವಾಲ ಸ್ವಾಗತಿಸಿದರು. ಮಂಜುನಾಥ ಹದ್ದಣ್ಣವರ ನಿರೂಪಿಸಿದರು.

# ಸುಕ್ಷೇತ್ರ ಕೊಡದಗುಡ್ಡದಲ್ಲಿ ಶಂಕುಸ್ಥಾಪನೆ ಕಾರ್ಯಕ್ರಮ ಇಂದು

■ವಿಜಯಸಾಕ್ಷಿ ಸುದ್ದಿ, ದಾವಣಗೆರೆ



ಜಗಳೂರು ತಾಲೂಕು ಸುಕ್ಷೇತ್ರ ಕೊಡದಗುಡ್ಡದಲ್ಲಿ ಶ್ರೀ ರಂಭಾಪುರಿ-ಶ್ರೀ ಕೇದಾರ ಜಗದ್ಗುರುಗಳ ಸಾನ್ನಿಧ್ಯದಲ್ಲಿ ಶ್ರೀ ವೀರಭದ್ರಸ್ವಾಮಿ ವಸತಿಗೃಹ ಉದ್ಘಾಟನೆ, ಕರಿಗಲ್ಲು ಸ್ಥಾಪನೆ, ಕಲ್ಯಾಣ ಮಂಟಪದ ಶಂಕುಸ್ಥಾಪನೆ, ದೇವಿಕೆರೆ ಗ್ರಾಮದಲ್ಲಿನ ಮಹಾದ್ವಾರ ಉದ್ಘಾಟನೆಯ ಅಂಗವಾಗಿ ಮಾ.14ರಂದು ಉಭಯ ಜಗದ್ಗುರುಗಳ ಅಡ್ಡಪಲ್ಲಕ್ಕಿ ಮಹೋತ್ಸವ ಹಾಗೂ ಸಂಸ್ಕೃತಿ ಜಾಗೃತಿ ಧರ್ಮ ಸಮಾರಂಭ ಜರುಗುವುದು.

ಬಾಳೆಹೊನ್ನೂರು ಶ್ರೀ ರಂಭಾಪುರಿ ಡಾ.ವೀರಸೋಮೇಶ್ವರ ಜಗದ್ಗುರುಗಳು ಹಾಗೂ ಶ್ರೀ ಕೇದಾರ ಭೀಮಾಶಂಕರಲಿಂಗ ಜಗದ್ಗುರುಗಳವರ ದಿವ್ಯ ಸಾನ್ನಿಧ್ಯದಲ್ಲಿ ಜರುಗುವ ಸಮಾರಂಭದಲ್ಲಿ ರಾಮಘಟ್ಟ ಪುರವರ್ಗ ಮಠದ ರೇವಣಸಿದ್ಧ ಶಿವಾಚಾರ್ಯ ಸ್ವಾಮಿಗಳು, ಕಣ್ವಕುಪ್ಪೆ ಗವಿಮಠದ ನಾಲ್ವಡಿ ಶಾಂತಲಿಂಗ ಶಿವಾಚಾರ್ಯ ಸ್ವಾಮಿಗಳು, ಹೊನ್ನಾಳಿ ಹಿರೇಕಲ್ಮಠದ ಒಡೆಯರ್ ಚನ್ನಮಲ್ಲಿಕಾರ್ಜುನ ಶಿವಾಚಾರ್ಯ ಸ್ವಾಮಿಗಳು ಹಾಗೂ ಶಿರಾಳಕೊಪ್ಪ ವಿರಕ್ತಮಠದ ಸಿದ್ಧೇಶ್ವರ ದೇವರು ನೇತೃತ್ವ ವಹಿಸವರು.

ಮುಖ್ಯ ಅತಿಥಿಗಳಾಗಿ ಜಿಲ್ಲಾ ಉಸ್ತುವಾರಿ ಹಾಗೂ ಗಣಿ ಭೂವಿಜ್ಞಾನ-ತೋಟಗಾರಿಕೆ ಖಾತೆ ಸಚಿವ ಎಸ್.ಎಸ್. ಮಲ್ಲಿಕಾರ್ಜುನ, ಶಾಸಕ ಬಿ. ದೇವೇಂದ್ರಪ್ಪ, ಮಾಜಿ ಶಾಸಕ ಎಸ್.ವಿ. ರಾಮಚಂದ್ರ, ದೇವೀಕೆರೆ ಜೆ.ಆರ್. ರವಿಚಂದ್ರ, ದಾವಣಗೆರೆಯ ಬಿ.ಸಿ. ಉಮಾಪತಿ, ಎಸ್.ಕೆ. ಶಶಿಧರ, ಕೊಗುಂಡಿ ಬಕ್ಕೇಶಪ್ಪ, ದೇವರಮನೆ ಶಿವಕುಮಾರ, ಚಿದಾನಂದಪ್ಪ, ಹೆಚ್.ಬಿ. ಮಂಜಪ್ಪ ಸೇರಿದಂತೆ ಅನೇಕ ಗಣ್ಯರು ಭಾಗವಹಿಸುವರು. ಕೊಡದಗುಡ್ಡ ಶ್ರೀ ವೀರಭದ್ರಸ್ವಾಮಿ ಟ್ರಸ್ಟ್ ಪದಾಧಿಕಾರಿಗಳು ಉಪಸ್ಥಿತರಿರುವರು ಎಂದು ಶ್ರೀಮಠದ ಪ್ರಕಟಣೆ ತಿಳಿಸಿದೆ.

# ಮತಗಟ್ಟೆಗಳಿಗೆ ಭೇಟಿ, ಮೂಲಭೂತ ಸೌಲಭ್ಯಗಳ ಪರಿಶೀಲನೆ

■ವಿಜಯಸಾಕ್ಷಿ ಸುದ್ದಿ, ರೋಣ

ತಾಲೂಕಿನ ವಿವಿಧ ಮತಗಟ್ಟೆಗಳಿಗೆ ಸೆಕ್ಟರ್ ಅಧಿಕಾರಿ ರಿಯಾಜ್ ಕೆ ಖತೀಬ ಅವರು ಭೇಟಿ ನೀಡಿ ಮತಗಟ್ಟೆಗಳಲ್ಲಿ ಮೂಲಭೂತ ಸೌಲಭ್ಯಗಳ ಪರಿಶೀಲನೆ ನಡೆಸಿದರು.

ರೋಣ ತಾಲೂಕಿನ ಮುಗಳಿ, ಬೆಳಗೋಡ, ಹೊನ್ನಿಗನೂರು, ಯರೇಕುರುಬನಹಾಳ ಇತರೆ ಗ್ರಾಮಗಳಲ್ಲಿ ಮತಗಟ್ಟೆ ಸಂಖ್ಯೆ:42, 43, 09, 18, 20 ,11, 12, 34, ಗೆ ಭೇಟಿ ನೀಡಿ ನಂತರ ಮಾತನಾಡಿದ ಅವರು, ಲೋಕಸಭಾ ಚುನಾವಣೆ ಸಮೀಪಿಸುತಿದ್ದು ಬಿ.ಎಲ್.ಓ ಗಳು ತಮ್ಮ ಮತಗಟ್ಟೆ ವ್ಯಾಪ್ತಿಯಲ್ಲಿ ಬರುವ ಮತದಾರರಿಗೆ ಮತದಾನ ಮಾಡಲು ಹೆಚ್ಚಿನ ಪ್ರಚಾರ ನೀಡುವಂತೆ ತಿಳಿಸಿದರು.

ಮತಗಟ್ಟೆಯಲ್ಲಿಯು ಸೌಲಭ್ಯಗಳಾದ ನೆರಳು, ಕುಡಿಯುವ ನೀರಿನ ವ್ಯವಸ್ಥೆ , ಕುರ್ಚಿ ವ್ಯವಸ್ಥೆ, ಶೌಚಾಲಯ ವ್ಯವಸ್ಥೆ, ವಿದ್ಯುತ್ ವ್ಯವಸ್ಥೆ ಮಾಡಿದ್ದರ ಬಗ್ಗೆ ಪರಿಶೀಲಿಸಿದರು. ಎಲ್ಲಾ ಮತಗಟ್ಟೆಗಳಿಗೆ ಎಲ್ಲ ಮತದಾರರು ವೋಟರ್ ಹೆಲ್ಪ್ ಲೈನ್ ಆ್ಯಪ್ ಹಾಕಿಕೊಳ್ಳುವಂತೆ ಮತದಾರಿಗೆ ತಿಳಿಸಿದರು.

ಈ ಸಂದರ್ಭದಲ್ಲಿ ಗ್ರಾಮ ಪಂಚಾಯತಿ ಅಭಿವೃದ್ಧಿ ಅಧಿಕಾರಿಗಳು, ಎಲ್ಲಾ ಬಿ.ಎಲ್.ಓ.ಗಳು ಉಪಸ್ಥಿತರಿದ್ದರು.



# ಸಾಹಿತಿ ಎಫ್.ಪಿ. ಲಕ್ಷ್ಮೇಶ್ವರಮಠರಿಗೆ ಕರ್ನಾಟಕ ರಾಜ್ಯೋತ್ಸವ ಪ್ರಶಸ್ತಿ



■ವಿಜಯಸಾಕ್ಷಿ ಸುದ್ದಿ, ಗುಲ್ಬರ್ಗಾ

ಗುಲ್ಬರ್ಗಾ ವಿಶ್ವವಿದ್ಯಾಲಯದ ಗಾಂಧಿ ಭವನದಲ್ಲಿ ನಗರದ ಹಿರಿಯ ಸಾಹಿತಿ ಎಫ್.ಪಿ. ಲಕ್ಷ್ಮೇಶ್ವರಮಠರಿಗೆ ಕನ್ನಡ ಸಾರಸತ್ವ ಪ್ರಪಂಚಕ್ಕೆ ಕನ್ನಡ-ಇಂಗ್ಲೀಷ್ ಭಾಷೆಗಳಲ್ಲಿ ಅನುವಾದ ಸಾಹಿತ್ಯ ಮತ್ತು ಕಾನೂನು ಪಠ್ಯಗಳ ರಚನೆಯಲ್ಲಿ ಅಮೂಲ್ಯ ಸಾಹಿತ್ಯ ಕೃಷಿ ಸಾಧನೆಗೆ 'ಕರ್ನಾಟಕ ರಾಜ್ಯೋತ್ಸವ ಪ್ರಶಸ್ತಿ 'ನೀಡಿ ಗೌರವಿಸಲಾಯಿತು.

ಗುಲ್ಬರ್ಗಾ ವಿಶ್ವವಿದ್ಯಾಲಯ ಕಳೆದ 40 ವರ್ಷಗಳಿಂದ ಹೆಸರಾಂತ ಲೇಖಕರನ್ನು ಗುರುತಿಸಿ ಗೌರವಿಸುತ್ತಿದೆ. ಒಟ್ಟು 14 ವಿಭಾಗಗಳಲ್ಲಿ 27 ಜನರಿಗೆ ಸ್ಮರಣಿಕೆ ಹಾಗೂ ನಗದು ಬಹುಮಾನ ನೀಡಿ ಗೌರವಿಸಲಾಯಿತು.

ಪ್ರೊ. ಮೀನಾಕ್ಷಿ ಬಾಳಿ ಪ್ರಶಸ್ತಿ ಪ್ರದಾನ ಮಾಡಿದರು. ವಿಶ್ವ ವಿದ್ಯಾಲಯದ ಕುಲಪತಿ ಪ್ರೊ. ದಯಾನಂದ ಅಗಸರ, ಪ್ರೊ. ಎಚ್.ಟಿ. ಪೋತೆ, ಕುಲಸಚಿವ ಡಾ. ಬಿ.ಶರಣಪ್ಪ ಸೇರಿದಂತೆ ಅನೇಕ ಗಣ್ಯರು ಉಪಸ್ಥಿತರಿದ್ದರು.

# ಸಂಸದ ಅನಂತಕುಮಾರ ಹೆಗಡೆ ವಿರುದ್ಧ ಕ್ರಮಕ್ಕೆ ಆಗ್ರಹ



■ವಿಜಯಸಾಕ್ಷಿ ಸುದ್ದಿ, ಗದಗ

ಸಂವಿಧಾನವು ನಮ್ಮ ದೇಶದ ಪವಿತ್ರ ಗ್ರಂಥವಾಗಿದೆ. ಬಾಬಾಸಾಹೇಬ ಅಂಬೇಡ್ಕರ ಅವರು ಶೋಷಿತ ಸಮುದಾಯಗಳಿಗೆ ಸಾಮಾಜಿಕ ನ್ಯಾಯ ಮತ್ತು ಸಮಾನ ಹಕ್ಕುಗಳು ಸಿಗಬೇಕೆಂದು ಭಾರತಕ್ಕೆ ಸಂವಿಧಾನವನ್ನು ನೀಡಿದ್ದಾರೆ. ನಮ್ಮ ದೇಶದ ಸಂವಿಧಾನದ ಮೂಲಕವೇ ನ್ಯಾಯಾಂಗ, ಕಾರ್ಯಾಂಗ ಮತ್ತು ಶಾಸಕಾಂಗ ನಡೆಯುತ್ತಿರುವುದು ಎಂಬುದನ್ನು ಮರೆತು ಸಂಸದ ಅನಂತಕುಮಾರ ಹೆಗಡೆ ಸಂವಿಧಾನ ಬದಲಾವಣೆ ಮಾಡುತ್ತೇವೆ ಎಂದು ಸಾರ್ವಜನಿಕವಾಗಿ ಹೇಳಿಕೆ ನೀಡಿದ್ದು, ಕೂಡಲೇ ಇಂತಹ ಸಂವಿಧಾನ ವಿರೋಧಿಯ ಮೇಲೆ ಸೂಕ್ತ ಕ್ರಮ ಕೈಗೊಳ್ಳಲು ಆಗ್ರಹಿಸಿ ಸ್ಲಂ ಜನಾಂದೋಲನ-ಕರ್ನಾಟಕ ಮತ್ತು ಗದಗ ಜಿಲ್ಲಾ ಸ್ಲಂ ಸಮಿತಿ ಪದಾಧಿಕಾರಿಗಳು ಜಿಲ್ಲಾಧಿಕಾರಿಗಳ ಮುಖಾಂತರ ರಾಜ್ಯಪಾಲರಿಗೆ ಮನವಿ ಸಲ್ಲಿಸಿದರು.

ಸ್ಲಂ ಜನಾಂದೋಲನ-ಕರ್ನಾಟಕ ರಾಜ್ಯ ಸಂಚಾಲಕ ಹಾಗೂ ಗದಗ ಜಿಲ್ಲಾ ಸ್ಲಂ ಸಮಿತಿ ಆಧ್ಯಕ್ಷ ಇಮ್ತಿಯಾಜ ಆರ್.ಮಾನ್ವಿ ಮಾತನಾಡಿ, ಸಂಸದ ಅನಂತಕುಮಾರ ಹೆಗಡೆ ನಿರಂತರವಾಗಿ ನಮ್ಮ ದೇಶದ ಸಂವಿಧಾನದ ವಿರುದ್ಧ ಹೇಳಿಕೆಗಳನ್ನು ನೀಡಿ ಸಂವಿಧಾನಕ್ಕೆ ಅಪಮಾನ ಮಾಡುತ್ತಿದ್ದಾರೆ.

ಕೇಂದ್ರ ಸರ್ಕಾರ ಚುನಾವಣೆ ಹತ್ತಿರವಾಗುತ್ತಿದಂತೆ ಸಂವಿಧಾನ ವಿರೋಧಿ ಪೌರತ್ವ ಕಾಯ್ದೆಯನ್ನು ಜಾರಿಗೆ ತಂದು ನಮ್ಮ ದೇಶದಲ್ಲಿ ವಾಸವಾಗಿರುವ ಕೋಟ್ಯಾಂತರ ಅಲ್ಪಸಂಖ್ಯಾತರ ಸಮುದಾಯಗಳಿಗೆ ಆತಂಕ ಸೃಷ್ಟಿಸುತ್ತಿದೆ.

ಕೇಂದ್ರ ಸರ್ಕಾರದ ಜನವಿರೋಧಿ ನೀತಿ ಮತ್ತು ಸಂವಿಧಾನ ವಿರೋಧಿ ಕಾಯ್ದೆ ಇದಾಗಿದ್ದು, ಕೂಡಲೇ ಈ ಕಾಯ್ದೆಯನ್ನು ಹಿಂದಕ್ಕೆ ಪಡೆಯಬೇಕೆಂದು ಆಗ್ರಹಿಸಿದರು.

ಈ ಸಂದರ್ಭದಲ್ಲಿ ಪದಾಧಿಕಾರಿಗಳಾದ ರವಿಕುಮಾರ ಬೆಳಮಕರ, ಅಶೋಕ ಕುಸಬಿ, ಇಬ್ರಾಹಿಮ ಮುಲ್ಲಾ, ಶಿವಾನಂದ ಶಿಗ್ಲಿ, ಮಂಜುನಾಥ ಶ್ರೀಗಿರಿ, ರೇವಣಪ್ಪ ಲಕ್ಕುಂಡಿ, ಬಸವರಾಜ ಅಗಸಿಕೇರಿ, ರಾಜೇಸಾಬ ತಹಸೀಲ್ದಾರ, ಚಮನಸಾಬ ನದಾಫ ಮುಂತಾದವರು ಉಪಸ್ಥಿತರಿದ್ದರು.

# ಅಂಗನವಾಡಿ ಕಟ್ಟಡಗಳ ಉದ್ಘಾಟನೆ

■ವಿಜಯಸಾಕ್ಷಿ ಸುದ್ದಿ, ಮುಳಗುಂದ



ಪಟ್ಟಣದಲ್ಲಿ ನೂತನವಾಗಿ ನಿರ್ಮಾಣವಾದ ನಾಲ್ಕು ಅಂಗನವಾಡಿ ಕಟ್ಟಡಗಳ ಉದ್ಘಾಟನೆ, ಶೌಚಾಲಯಗಳ ಹಾಗೂ ವಿವಿಧ ಕಾಮಗಾರಿಗಳಿಗೆ ಭೂಮಿಪೂಜೆಯನ್ನು ಪ.ಪಂ ಸ್ಥಾಯಿ ಸಮಿತಿ ಅಧ್ಯಕ್ಷ ಮಾಹಾಂತಪ್ಪ ನೀಲಗುಂದ ಉದ್ಘಾಟಿಸಿದರು.

ಪ.ಪಂ ಸದಸ್ಯರಾದ ಕೆ.ಎಲ್. ಕರಿಗೌಡ್ರ, ಎಸ್.ಸಿ. ಬಡ್ನಿ, ಮಾಹಾದೇವಪ್ಪ ಗಡಾದ, ನಾಗರಾಜ ದೇಶಪಾಂಡೆ, ವಿಜಯ ನೀಲಗುಂದ, ಇಮಾಮಸಾಬ ಶೇಖ, ಮಲ್ಲಪ್ಪ ಚವ್ಹಾಣ, ಉಮಾ ಮಟ್ಟಿ, ಚಂಪಾವತಿ ಗುಳೇದ, ಪ.ಪಂ ಮುಖ್ಯಾಧಿಕಾರಿ ಮಂಜುನಾಥ ಗುಳೇದ, ಸಿಡಿಪಿಓ ಎಚ್.ಎಸ್. ಜೋಗೇರ, ಎಸಿಡಿಪಿಓ ರಾಧಾಜೀ ಮಣ್ಣೂರ, ಅಂಗನವಾಡಿ ಮೇಲ್ವಿಚಾರಕಿ ಗೀತಾ ದ್ಯಾಮನಗೌಡರ, ಅಂಗನವಾಡಿ ಕಾರ್ಯಕರ್ತೆಯರಾದ ಶಕೀಲಾ ಮುಜಾವಾರ, ಪುಷ್ಪಾ ಮಾದಮ್ಮನವರ, ವನೀತಾ ಬಸಾಪೂರ, ರೇಣುಕಾ ಯಲಿಗಾರ, ಜಿ.ಎಂ. ತಡೆದಮಠ, ಸವಿತಾ ದುಮ್ಮಿ, ಶಾಹೀದಾ ಹಣಗಿ, ಶರಣಮ್ಮಾ ಕಾಳೆ, ಬಿ.ಎಂ. ಕಮತಗಿ, ಎಂ.ಎಂ. ಅಬ್ಬುನವರ, ಶೋಭಾ ಆರಾಧ್ಯಮಠ, ನೀಲಮ್ಮಾ ಗಡಾದ ಮುಂತಾದವರಿದ್ದರು.

# ಕಾಂಗ್ರೆಸ್‌ನದ್ದು ಅರ್ಹ ಗೆಲುವಲ್ಲ: ಸಂಜೀವ್ ರೆಡ್ಡಿ

■ವಿಜಯಸಾಕ್ಷಿ ಸುದ್ದಿ, ಹರಪನಹಳ್ಳಿ



ಕಾಂಗ್ರೆಸ್ ಪಕ್ಷಕ್ಕೆ ಸಿಕ್ಕ ಜಯ ಗ್ಯಾರಂಟಿಗಳ ಆಮಿಷದ್ದೇ ಹೊರತು ಅರ್ಹ ಗೆಲುವಲ್ಲ ಎಂದು ಜಿಲ್ಲಾ ಬಿಜೆಪಿ ಪ್ರಧಾನ ಕಾರ್ಯದರ್ಶಿ ಸಂಜೀವ್ ರೆಡ್ಡಿ ಅಭಿಪ್ರಾಯ ವ್ಯಕ್ತಪಡಿಸಿದರು.

ಪಟ್ಟಣದ ಹೊಸಪೇಟೆ ರಸ್ತೆಯ ಬಿಜೆಪಿ ಕಚೇರಿಯಲ್ಲಿ ಕರೆಯಲಾಗಿದ್ದ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ನೈಜತೆ ಅರಿತ ಮತದಾರ ಮುಂದಿನ ದಿನಗಳಲ್ಲಿ ತಕ್ಕ ಉತ್ತರ ನೀಡಲಿದ್ದಾರೆ. ರಾಜ್ಯಾಧ್ಯಕ್ಷರಾಗಿ ವಿಜಯೇಂದ್ರ ಆಯ್ಕೆಯಾದ ಮೇಲೆ ಹೊಸ ಚೈತನ್ಯ ಬಂದಂತಾಗಿದೆ. ರಾಜ್ಯಾದ್ಯಂತ ಪ್ರತೀ ಕ್ಷೇತ್ರದ ಎಲ್ಲಾ ಘಟಕಗಳಿಗೂ ಹಳೆಯ ಬೇರು-ಹೊಸ ಚಿಗುರು ಎಂಬಂತೆ ಹಳಬರ ಜ್ಞಾನ, ಹೊಸಬರ ಹುಮ್ಮಸ್ಸು ಸೇರಿಸಿ ಪದಾಧಿಕಾರಿಗಳ ಆಯ್ಕೆ ಪ್ರಕ್ರಿಯೆ ಪೂರ್ಣಗೊಳಿಸಿದ್ದಾರೆ ಎಂದರು.

ಈಗ ಆಯ್ಕೆಯಾಗಿರುವ ಪದಾಧಿಕಾರಿಗಳ ಪದಗ್ರಹಣ ಕಾರ್ಯಕ್ರಮ ಮಾ. 16ರಂದು ಪಟ್ಟಣದ ತರಳಬಾಳು ಕಲ್ಯಾಣ ಮಂಟಪದಲ್ಲಿ ಜರುಗಲಿದೆ. ಈ ಕಾರ್ಯಕ್ರಮಕ್ಕೆ ಭೈರತಿ ಬಸವರಾಜ್, ಜಿ.ಎಂ. ಸಿದ್ದೇಶ್ವರ್ ಸೇರಿದಂತೆ ಅನೇಕ ರಾಜ್ಯ ಹಾಗೂ ಜಿಲ್ಲಾ ನಾಯಕರುಗಳು ಭಾಗವಹಿಸಲಿದ್ದಾರೆ ಎಂದರು.

ಜಿಲ್ಲೆಯ ಕಾರ್ಯದರ್ಶಿ ಮತ್ತಿಹಳ್ಳಿ ಕೊಟ್ರೇಶ್, ಎಸ್‌ಟಿ ಮೋರ್ಚಾ ಪ್ರಧಾನ ಕಾರ್ಯದರ್ಶಿ ಆರ್.ಲೋಕೇಶ್, ಮಂಡಲ ಕಾರ್ಯದರ್ಶಿ ಯು. ಎನ್. ಪ್ರವೀಣ್, ಎಸ್‌ಟಿ ಮೋರ್ಚಾ ಕಾರ್ಯದರ್ಶಿ ಮನೋಜ್ ತಳವಾರ್ ಅವರ ಸ್ಥಾನಗಳಿಗೆ ನೀಡಿದ ರಾಜನಾಮೆಯನ್ನು ಜಿಲ್ಲಾಧ್ಯಕ್ಷರು ಅಂಗೀಕರಿಸಿದ್ದಾರೆ. ಮುಂದಿನ ದಿನಗಳಲ್ಲಿ ಆಸ್ಥಾನಗಳಿಗೆ ಸೂಕ್ತ ವ್ಯಕ್ತಿಗಳ ಆಯ್ಕೆ ನಡೆಯುವುದು ಎಂದರು.

ಮಂಡಲ ಅಧ್ಯಕ್ಷ ಕೆ. ಲಕ್ಷ್ಮಣ ಮಾತನಾಡಿದರು. ಸುದ್ದಿಗೋಷ್ಠಿಯಲ್ಲಿ ಸಹಕಾರ ಸಂಘಗಳ ರಾಜ್ಯಾಧ್ಯಕ್ಷ ನಂಜನಗೌಡ, ಜಿಲ್ಲಾ ಉಪಾಧ್ಯಕ್ಷ ಹೆಚ್.ಎಂ. ಅಶೋಕ್ ಹರಾಳ್, ಜಿಲ್ಲಾ ಪ್ರಧಾನ ಕಾರ್ಯದರ್ಶಿ ಕೆ.ರಾಘವೇಂದ್ರ, ಬ್ಯಾಲಾಹುಣಸಿ ರಾಮಣ್ಣ, ಕುಸುಮಾ ಜಗದೀಶ್, ಚನ್ನನಗೌಡ, ಕಣಿವಿಹಳ್ಳಿ ಮಂಜುನಾಥ್, ಉದಯಕುಮಾರ್, ಮುತ್ತಿಗಿ ವಾಗೀಶ್, ಸಂಗಮೇಶ್, ವೆಂಕಟೇಶ್ ನಾಯ್ಕ್, ಹಲವಾಗಲು ದ್ಯಾಮಜ್ಜ, ಕಡತಿ ರಮೇಶ್ ಸೇರಿದಂತೆ ಅನೇಕರು ಉಪಸ್ಥಿತರಿದ್ದರು.

## ಗ್ಯಾರಂಟಿ ಯೋಜನೆಗಳಂತಹ ಕಾರ್ಯಕ್ರಮ ಜಗತ್ತಿನಲ್ಲಿಯೇ ಇಲ್ಲ

▶▶ ಮೊದಲನೇ ಪುಟದಿಂದ

ರಾಜ್ಯ ಖನಿಜ ನಿಗಮದ ಅಧ್ಯಕ್ಷರು ಹಾಗೂ ರೋಣ ಶಾಸಕರಾದ ಜಿ.ಎಸ್. ಪಾಟೀಲ ಮಾತನಾಡಿ, ಬೆಲೆ ಏರಿಕೆಯಿಂದ ಬಸವಳಿದ ಜನಸಾಮಾನ್ಯರಿಗೆ ಮುಖ್ಯಮಂತ್ರಿ ಸಿದ್ಧರಾಮಯ್ಯ ಹಾಗೂ ಉಪಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ನೇತೃತ್ವದ ರಾಜ್ಯ ಸರ್ಕಾರವು ಚುನಾವಣಾ ಪೂರ್ವ ನೀಡಿದ ಭರವಸೆಗಳಾದ ಪಂಚ ಗ್ಯಾರಂಟಿ ಅನುಷ್ಠಾನ ಮಾಡುವ ಮೂಲಕ ಬಡವರ ಆರ್ಥಿಕ ಅಭಿವೃದ್ಧಿಗೆ ಶ್ರಮಿಸಿದೆ ಎಂದರು.

ಪಂಚ ಗ್ಯಾರಂಟಿ ಯೋಜನೆಗಳನ್ನು ಜಿಲ್ಲಾಧಿಕಾರಿ ವೈಶಾಲಿ ಎಂ.ಎಲ್ ಹಾಗೂ ಜಿಲ್ಲಾಡಳಿತದ ಎಲ್ಲ ಅಧಿಕಾರಿಗಳ ನಿರಂತರ ಶ್ರಮದಿಂದ ಸಮರ್ಪಕವಾಗಿ ಅನುಷ್ಠಾನಗೊಳಿಸಲಾಗಿದೆ. ಯೋಜನೆಗಳ ಅನುಷ್ಠಾನದಲ್ಲಿ ಕಾರ್ಯಕರ್ತರ ಶ್ರಮವೂ ಅಡಗಿದ್ದು, ಎಲ್ಲರಿಗೂ ಅಭಿನಂದನೆಗಳು ಎಂದರು.

ಕಾರ್ಯಕ್ರಮದಲ್ಲಿ ಮಾಜಿ ಶಾಸಕ ಡಿ.ಆರ್. ಪಾಟೀಲ, ಗದಗ ಜಿಲ್ಲಾ ಮಟ್ಟದ ಗ್ಯಾರಂಟಿ ಸಮಿತಿಯ ಜಿಲ್ಲಾಧ್ಯಕ್ಷ ಬಿ.ಬಿ. ಅಸೂಟಿ, ತಾಲೂಕಾಧ್ಯಕ್ಷ ಅಶೋಕ ಮಂದಾಲಿ ಸೇರಿದಂತೆ ಗಣ್ಯರಾದ ಎಸ್.ಎನ್. ನೀಲಗುಂದ, ಎಂ.ಟಿ. ಬಟ್ಟೂರ, ಬಸವರಾಜ ಕಡೆಮನಿ, ನೀಲವ್ವ ಬೋಳೆಣ್ಣವರ, ಹನುಮಂತಪ್ಪ ಪೂಜಾರ, ಶಕುಂತಲಾ ಅಕ್ಕಿ, ಶ್ರೀನಿವಾಸ ಹುಯಿಲಗೋಳ, ಮಹಾಂತೇಶ, ಉಮಾ ಮಟ್ಟಿ, ನಾಗರಾಜ ದೇಶಪಾಂಡೆ, ಮಲ್ಲಪ್ಪ ಚವ್ಹಾಣ, ವಿಜಯಕುಮಾರ್ ನೀಲಗುಂದ, ಅನುಸೂಯಾ, ಕಲ್ಲನಗೌಡ ಕರಿಗೌಡ, ಕುರ್ಷಿನಾ ಕಲ್ಲನಗೌಡ್ರ, ಬಸವಂತಪ್ಪ ಹಾರೋಗೇರಿ, ಇಮಾಮಸಾಬ ಶೇಖ್, ಮಹಾದೇವಪ್ಪ ಗಡಾದ, ಲಕ್ಷ್ಮವ್ವ ಕುಂದಗೋಳ, ಚಂಪವ್ವ ಗುಳೇದ, ನೀಲವ್ವ ಅಸುಂಡಿ, ಯಲ್ಲವ್ವ ಕವಲೂರ, ಎಸ್.ಎನ್. ಬಳ್ಳಾರಿ, ಅಜ್ಜಪ್ಪ ಉಗ್ಗಣ್ಣವರ, ಲಕ್ಷ್ಮೀ ಅನಿಲ ಸಿದ್ಧನಹಳ್ಳಿ, ಪರವೀನಬಾನು ಮುಲ್ಲಾ, ಬಾಶಾ ಮಲ್ಲಸಮುದ್ರ, ಕೃಷ್ಣಗೌಡ ಪಾಟೀಲ, ಮಲ್ಲಪ್ಪ ಬಾರಕೇರ, ಮಲ್ಲಪ್ಪ ಚಿಂಚಲಿ, ದೇವರಡ್ಡಿ ತಿರ್ಲಾಪುರ, ರಮೇಶ ಹೊನ್ನಿಕಾಯಕರ, ಸಂಗಮೇಶ ಹಾದಿಮನಿ, ಸಂಗು ಕೆರಗಲ ಮಟ್ಟಿ, ಸಾವಿತ್ರಿ ಹೂಗಾರ, ದಯಾನಂದ ಪವಾರ, ಶಂಭು ಕಾಳೆ, ಮೀನಾಕ್ಷಿ ಬಳೆಣ್ಣವರ, ಸೇರಿದಂತೆ ಉಪವಿಭಾಗಾಧಿಕಾರಿ ಡಾ.ವೆಂಕಟೇಶ ನಾಯ್ಕ, ತಹಸೀಲ್ದಾರ ಶ್ರೀನಿವಾಸಮೂರ್ತಿ ಕುಲಕರ್ಣಿ, ತಾ.ಪಂ ಕಾರ್ಯನಿರ್ವಾಹಕ ಅಧಿಕಾರಿ ಡಾ. ಹಿರಾಲಾಲ ಜಿನಗಿ ಹಾಗೂ ವಿವಿಧ ತಾಲೂಕಾ ಮಟ್ಟದ ಅಧಿಕಾರಿಗಳು ಹಾಜರಿದ್ದರು.

### ಮಕ್ಕಳಿಲ್ಲದ ದಂಪತಿಗಳ ಮಡಿಲಿಗೆ ದತ್ತು ಮಗು ಹಸ್ತಾಂತರ ಕಾರ್ಯಕ್ರಮದಲ್ಲಿ ಡಾ.ವೀರೇಶ್ವರ ಶ್ರೀಗಳು

# ದತ್ತಕ ಆದವರು ಜಗತ್ತನ್ನೇ ಆಳಿದ್ದಾರೆ

■ ವಿಜಯಸಾಕ್ಷಿ ಸುದ್ದಿ, ಗದಗ

ಹೊಟ್ಟೆಯಲ್ಲಿ ಹುಟ್ಟಿದ ಮಕ್ಕಳು ಆಸ್ತಿಗಾಗಿ ಬಡಿದಾಡಿದ್ದಾರೆ, ದತ್ತಕ ಆದವರು ಜಗತ್ತನ್ನೇ ಆಳಿದ್ದಾರೆ ಎಂದು ಜಗದ್ಗುರು ಅನ್ನದಾನೀಶ್ವರ ಸಂಸ್ಥಾನ ಮಠದ ನರಸಾಪೂರ ಶಾಖಾಮಠದ ಪೂಜ್ಯ ಮ.ನಿ.ಪ್ರ ಡಾ.ವೀರೇಶ್ವರ ಮಹಾಸ್ವಾಮಿಗಳು ಹೇಳಿದರು.

ಅವರು ಬುಧವಾರ ಗದಗ-ಬೆಟಗೇರಿಯ ಸೇವಾಭಾರತಿ ಟ್ರಸ್ಟ್‌ನ ಅಮೂಲ್ಯ ವಿಶೇಷ ದತ್ತು ಸ್ವೀಕಾರ ಸಂಸ್ಥೆಯಲ್ಲಿ ಪೋಷಣೆಗೊಂಡ ಈರ್ವರು ಮಕ್ಕಳನ್ನು ಮಕ್ಕಳಿಲ್ಲದ ದಂಪತಿಗಳಿಗೆ ಕಾನೂನಿನ ಅನ್ವಯ ದತ್ತು ಮಗುವಾಗಿ ಹಸ್ತಾಂತರಿಸಿ ಮಾತನಾಡಿದರು.

ದತ್ತು ಮಕ್ಕಳಿಗೂ ಮಠದ ಸ್ವಾಮಿಗಳಿಗೂ ವ್ಯತ್ಯಾಸವಿಲ್ಲ. ವಿದ್ಯೆ, ಸಂಸ್ಕಾರ, ಧಾರ್ಮಿಕ ಮತ್ತು ಆಧ್ಯಾತ್ಮಿಕವಾಗಿ ಅನುಭವ ಹೊಂದಿದವರನ್ನು ಧರ್ಮ ಮತ್ತು ಕಾನೂನು ಪ್ರಕಾರ ಪಟ್ಟಾಧಿಕಾರ ಮಾಡಿ ಮಠದ ಸ್ವಾಮಿಗಳನ್ನಾಗಿ ಮಾಡುವ ಪದ್ಧತಿ ಒಂದೆಡೆಯಾದರೆ, ದತ್ತು ಕೇಂದ್ರದಲ್ಲಿ ಪೋಷಣೆ ಮಾಡಿದ ಪರಿತ್ಯಕ್ತ ಮಕ್ಕಳನ್ನು ಸರಕಾರ ರೂಪಿಸಿದ ಕಾಯ್ದೆ-ಕಾನೂನಿನ ಅಡಿಯಲ್ಲಿ ಮಕ್ಕಳಿಲ್ಲದ ದಂಪತಿಗಳಿಗೆ ಹಸ್ತಾಂತರಿಸಲಾಗುತ್ತದೆ. ಮಠದ ಪೀಠಕ್ಕಾದವರು ಮಠವನ್ನು, ಸಮಾಜವನ್ನು ಬೆಳೆಸಿ ಮಾರ್ಗದರ್ಶನ ಮಾಡುವರು ಹಾಗೆಯೇ ದತ್ತಕ್ ಹೋದವರು ಮನ-ಮನೆ ಬೆಳಗಿಸುವರು ಎಂದರು.




ಸಮಾರಂಭದ ಅಧ್ಯಕ್ಷತೆ ವಹಿಸಿದ್ದ ಅಮೂಲ್ಯ ವಿಶೇಷ ದತ್ತು ಸ್ವೀಕಾರ ಸಂಸ್ಥೆಯ ಅಧ್ಯಕ್ಷ ಮಲ್ಲಿಕಾರ್ಜುನ ಬೆಲ್ಲದ ಮಾತನಾಡಿ, ಹುಬ್ಬಳ್ಳಿಯ ಸೇವಾಭಾರತಿ ಟ್ರಸ್ಟ್‌ನಿಂದ ನಡೆಯುತ್ತಿರುವ ಈ ಸಂಸ್ಥೆಯು ಸಮಾಜಮುಖಿಯಾಗಿ, ಮಾನವೀಯ ಕಾರ್ಯ ಮಾಡುವಲ್ಲಿ ತನ್ನನ್ನು ಸಮರ್ಪಿಸಿಕೊಂಡಿದೆ ಎಂದರು.

ಮುಖ್ಯ ಅತಿಥಿಗಳಾಗಿ ಆಗಮಿಸಿದ್ದ ಗಣ್ಯ ವ್ಯಾಪಾರಸ್ಥರಾದ ಅಭಿಷೇಕ ವಿಜಯಕುಮಾರ ಗಡ್ಡಿ, ವೀಣಾ ಅಭಿಷೇಕ ಗಡ್ಡಿ, ರಾಯನಗೌಡ ಓದುಗೌಡರ, ತುಳಸಾ ರಾಯನಗೌಡ ಓದುಗೌಡರ ಸಂದರ್ಭೋಚಿತವಾಗಿ ಮಾತನಾಡಿದರು.

ತಮಿಳುನಾಡಿನ ಸೇಲಮ್ ಹಾಗೂ ಕರ್ನಾಟಕದ ಬೆಳಗಾವಿಯ ಮಕ್ಕಳಿಲ್ಲದ ದಂಪತಿಗಳಿಗೆ ಮುಖ್ಯ ಅತಿಥಿಗಳು ಮಕ್ಕಳನ್ನು ಹಸ್ತಾಂತರಿಸಿ ಶುಭ ಕೋರಿದರು.

ಮಕ್ಕಳ ಕಲ್ಯಾಣ ಸಮಿತಿಯ ಅಧ್ಯಕ್ಷೆ ಅನ್ನಪೂರ್ಣ ಗಾಣಿಗೇರ ದತ್ತು ಮಕ್ಕಳ ಸಂಸ್ಥೆ ಮತ್ತು ಮಕ್ಕಳ ಕಲ್ಯಾಣ ಸಮಿತಿಯ ಕಾರ್ಯಚಟುವಟಿಕೆ ಹಾಗೂ ಕರ್ತವ್ಯಗಳನ್ನು ವಿವರಿಸಿದರು. ಮಂಜುನಾಥ ಚನ್ನಪ್ಪನವರ ಅಮೂಲ್ಯ ವಿಶೇಷ ದತ್ತು ಸ್ವೀಕಾರ ಸಂಸ್ಥೆ ನಡೆದು ಬಂದ ದಾರಿಯನ್ನು ವಿವರಿಸಿದರು.

ಲಲಿತಾಬಾಯಿ ಮೇರವಾಡೆ ಪ್ರಾರ್ಥಿಸಿದರು. ಅರುಣ ರಾಜಪುರೋಹಿತ ಸ್ವಾಗತಿಸಿ ಪರಿಚಯಿಸಿದರು. ನರಸಿಂಹ ಕಾಮಾರ್ತಿ ನಿರೂಪಿಸಿದರು. ರಾಜೇಶ ಖಟವಟೆ ವಂದಿಸಿದರು. ಕಾರ್ಯಕ್ರಮದಲ್ಲಿ ನಾಗವೇಣಿ ಕಟ್ಟಿಮನಿ, ಉಮಾ ಚನ್ನಪ್ಪನವರ, ಜಯರಾಜ ಮುಳಗುಂದ, ಜೀತೇಂದ್ರ ಶಹಾ, ಗುರುಸಿದ್ಧಪ್ಪ ಕೊಣ್ಣೂರ, ಚೇತನ್ ಮೇರವಾಡೆ ಮುಂತಾದವರು ಪಾಲ್ಗೊಂಡಿದ್ದರು.

> ಇದು ದತ್ತಕ ಅಲ್ಲ, ಸ್ವಂತಕ ಎಂದು ತಿಳಿಯಬೇಕು. ಹೆತ್ತವರಿಗಿಂತ ಹೊತ್ತು ಬೆಳೆಸಿದವರು ದೊಡ್ಡವರು. ಅಲ್ಲಿ ಭಕ್ತರು, ಇಲ್ಲಿ ಪೋಷಕರು ಆಧಾರ ಸ್ಥಂಬ ಅಷ್ಟೇ. ಇಂದಿಲ್ಲಿ ದತ್ತು ಸ್ವೀಕಾರ ಸಂಸ್ಥೆಯಲ್ಲಿ ಪೋಷಣೆಗೊಂಡ ಮಕ್ಕಳನ್ನು ಪಡೆಯುವ ಪಾಲಕ-ಪೋಷಕರು ಮಗುವಿಗೆ ಒಳ್ಳೆಯ ಶಿಕ್ಷಣ, ಸಂಸ್ಕಾರ ನೀಡಿ ಅವರನ್ನು ಸತ್ಪ್ರಜೆಗಳನ್ನಾಗಿ ಮಾಡಲಿ. ಈ ಮಕ್ಕಳು ಸಮಾಜದಲ್ಲಿ, ದೇಶದಲ್ಲಿ ದೊಡ್ಡ ಸಾಧಕರಾಗಲಿ ಎಂದು ಡಾ.ವೀರೇಶ್ವರ ಮಹಾಸ್ವಾಮಿಗಳು ಆಶಿಸಿದರು.

## ಗಾಲಾ ನರ್ಸಿಂಗ್ ಕಾಲೇಜಿನಲ್ಲಿ 'ಲ್ಯಾಬ್ ಟೆಕ್ನಿಷಿಯನ್ ದಿನ'




■ ವಿಜಯಸಾಕ್ಷಿ ಸುದ್ದಿ, ಗದಗ

ಇಲ್ಲಿನ ವಿ ಪಿ ಗಾಲಾ ಇನ್ಸ್ಟಿಟ್ಯೂಟ್ ಆಫ್ ಪ್ಯಾರಾಮೆಡಿಕಲ್ ಸೈನ್ಸ್‌ನಲ್ಲಿ ವಿಶ್ವ ಲ್ಯಾಬ್ ಟೆಕ್ನಿಷಿಯನ್ ದಿನ ಆಚರಿಸಲಾಯಿತು.

ಪ್ರಾಂಶುಪಾಲ ಅಮರಯ್ಯ ಚಿನ್ನಯ್ಯನಮಠ ಮಾತನಾಡಿ, ಭಾರತದಲ್ಲಿ ಮಾರ್ಚ್ 13ರಂದು ವಿಶ್ವ ಲ್ಯಾಬ್ ಟೆಕ್ನಿಷಿಯನ್ ದಿನ ಆಚರಿಸಲಾಗುತ್ತದೆ. ಪ್ರಯೋಗಾಲಯ ತಂತ್ರಜ್ಞರ ದಿನವು ಆರೋಗ್ಯ ವ್ಯವಸ್ಥೆಯಲ್ಲಿ ಅವರ ದಣಿವರಿಯದ ಪ್ರಯತ್ನಗಳಿಗೆ ಕೃತಜ್ಞತೆಯನ್ನು ವ್ಯಕ್ತಪಡಿಸುವ ಸಮಯವಾಗಿದೆ. ವೈದ್ಯಕೀಯ ನಿರ್ಧಾರಗಳನ್ನು ತಿಳಿಸುವ ರೋಗನಿರ್ಣಯ ಪರೀಕ್ಷೆಗಳನ್ನು ನಡೆಸುವುದರಿಂದ ಲ್ಯಾಬ್ ತಂತ್ರಜ್ಞರು ಆರೋಗ್ಯ ರಕ್ಷಣೆಯಲ್ಲಿ ಪ್ರಮುಖರಾಗಿದ್ದಾರೆ. ರೋಗ ಪತ್ತೆ, ಮೇಲ್ವಿಚಾರಣೆ ಮತ್ತು ಸಂಶೋಧನೆಯಲ್ಲಿ ಅವರು ಪ್ರಮುಖ ಪಾತ್ರವನ್ನು ವಹಿಸುತ್ತಾರೆ. ರೋಗಿಗಳ ಆರೈಕೆ, ಸಾರ್ವಜನಿಕ ಆರೋಗ್ಯ ಮತ್ತು ವೈದ್ಯಕೀಯ ಪ್ರಗತಿಗೆ ಗಮನಾರ್ಹವಾಗಿ ಕೊಡುಗೆ ನೀಡಿದ್ದಾರೆ ಎಂದರು.

ಕಾಲೇಜಿನ ಅಧ್ಯಕ್ಷೆ ರಚನಾ ಗಾಲಾ, ಸೆಕ್ರೆಟರಿ ಪಂಕಜ್ ಗಾಲಾ, ನಿರ್ದೇಶಕ ಗುಂಜನ ಗಾಲಾ, ಕಾಲೇಜಿನ ಪ್ಯಾರಾಮೆಡಿಕಲ್ ಹಾಗೂ ನರ್ಸಿಂಗ್ ಸಿಬ್ಬಂದಿ ವರ್ಗ, ಎಲ್ಲ ವಿದ್ಯಾರ್ಥಿಗಳು ಭಾಗವಹಿಸಿದ್ದರು.

### ವೀರಶೈವ ಲಿಂಗಾಯತ ಪಂಚಮಸಾಲಿ ಸಂಘದದಿಂದ 'ಅಂತಾರಾಷ್ಟ್ರೀಯ ಮಹಿಳಾ ದಿನಾಚರಣೆ'

# ತೊಟ್ಟಿಲು ತೂಗುವ ಕೈ ಜಗತ್ತನ್ನೇ ಆಳಬಲ್ಲದು

■ ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ

ಎಲ್ಲಿ ಸ್ತ್ರೀಯರು ಗೌರವಿಸಲ್ಪಡುತ್ತಾರೋ ಅಲ್ಲಿ ದೇವತೆಗಳು ನೆಲೆಸುತ್ತಾರೆ ಎಂಬ ಸತ್ಯವನ್ನರಿತು ಪ್ರತಿಯೊಬ್ಬರೂ ಮಹಿಳೆಯರನ್ನು ಪೂಜ್ಯನೀಯ ಭಾವನೆಯಿಂದ ಕಾಣಬೇಕು. ಮೊದಲ ಗುರುವಾದ ತಾಯಂದಿರು ಮಕ್ಕಳಿಗೆ ಶಿಕ್ಷಣದ ಜತೆಗೆ ಸಂಸ್ಕಾರ, ಮೌಲ್ಯ, ದೇವರು, ಧರ್ಮ, ಗುರು ಹಿರಿಯರ ಬಗ್ಗೆ ಗೌರವ ಭಾವನೆ ಮೂಡಿಸಬೇಕು ಎಂದು ಮುಕ್ತಿಮಂದಿರ ಧರ್ಮಕ್ಷೇತ್ರದ ಶ್ರೀ ವಿಮಲರೇಣುಕ ವೀರಮುಕ್ತಿಮುನಿ ಶಿವಾಚಾರ್ಯರು ಹೇಳಿದರು.

ಅವರು ಪಟ್ಟಣದಲ್ಲಿ ಲಕ್ಷ್ಮೇಶ್ವರ ತಾಲೂಕ ವೀರಶೈವ ಲಿಂಗಾಯತ ಪಂಚಮಸಾಲಿ ಸಂಘದದಿಂದ ಹಮ್ಮಿಕೊಂಡಿದ್ದ 'ಅಂತಾರಾಷ್ಟ್ರೀಯ ಮಹಿಳಾ ದಿನಾಚರಣೆ' ಕಾರ್ಯಕ್ರಮದ ಸಾನಿಧ್ಯವಹಿಸಿ ಮಾತನಾಡಿದರು.

ತೊಟ್ಟಿಲು ತೂಗುವ ಕೈ ಜಗತ್ತನ್ನೇ ಆಳಬಲ್ಲದು ಎಂಬಂತೆ ಮಹಿಳೆಯು ಕುಟುಂಬದ ಪ್ರಗತಿಗಷ್ಟೇ ಅಲ್ಲದೆ, ಎಲ್ಲ ಕ್ಷೇತ್ರಗಳಲ್ಲಿ ಅಪ್ರತಿಮ ಸಾಧನೆ, ಸೇವೆಯ ಮೂಲಕ ದೇಶದ ಪ್ರಗತಿಗೂ ಕಾರಣಳಾಗಿದ್ದಾಳೆ. ಮಹಿಳೆಯರನ್ನು ಗೌರವ ಮತ್ತು ಸಮಾನತೆ ಭಾವನೆಯಿಂದ ಕಾಣಬೇಕು. ಮಕ್ಕಳಲ್ಲಿ ಉತ್ತಮ ಸಂಸ್ಕಾರ ಮತ್ತು ಸಂಸ್ಕೃತಿ ಎಂಬ ಬೀಜ ಬಿತ್ತಿದರೆ ಜೀವನದಲ್ಲಿ ಉತ್ತಮ ಫಲ ಪಡೆಯಬಹುದೆಂದರು.

ಕ್ಷೇತ್ರ ಶಿಕ್ಷಣಾಧಿಕಾರಿ ಮಂಗಳಾ ತಾಪಸ್ಕರ ಮಾತನಾಡಿ, ಹೆಣ್ಣೊಂದು ಕಲಿತರೆ ಶಾಲೆಯೊಂದು ತೆರೆದಂತೆ ಮತ್ತು ಆ ಮೂಲಕ ಬಲಿಷ್ಠ ರಾಷ್ಟ್ರ ನಿರ್ಮಾಣ ಸಾಧ್ಯ. ಪಾಲಕರು ಹೆಣ್ಣು ಮಕ್ಕಳ ಶಿಕ್ಷಣಕ್ಕೆ ಆದ್ಯತೆ ನೀಡಬೇಕು. ಕೃಷಿ, ಶಿಕ್ಷಣ, ಸಾಮಾಜಿಕ, ರಾಜಕೀಯ ಹೀಗೆ ಎಲ್ಲ ಕಡೆಗಳಲ್ಲಿ ಮಹಿಳೆಯ ಸ್ಥಾನಮಾನ ಹೆಚ್ಚುತ್ತಾ ಹೋಗುತ್ತಿದೆ ಎಂದರು.



> ರಾಜ್ಯಮಟ್ಟದ ಶ್ರೇಷ್ಠ ಕೃಷಿ ಮಹಿಳೆ ಪುರಸ್ಕೃತ ರಾಜೇಶ್ವರಿ ಪಾಟೀಲ ಮಾತನಾಡಿ, ಕೃಷಿ ನಮ್ಮ ದೇಶದ ಸಂಸ್ಕೃತಿ ಮತ್ತು ಸಂಪತ್ತಾಗಿದೆ. ಪುರುಷ ಮತ್ತು ಕೃಷಿ ಪ್ರಧಾನ ಸಮಾಜದಲ್ಲಿ ಮಹಿಳೆಯರ ಪಾತ್ರವೇ ಮುಖ್ಯವಾಗಿದೆ. ವಾಸ್ತವದಲ್ಲಿ ಮಹಿಳೆಯರು ಪುರುಷರಿಗೆ ಸಮನಾಗಿ ಮತ್ತು ಅವರಿಗಿಂತ ಹೆಚ್ಚು ಕೆಲಸ ಮಾಡುತ್ತಾರೆ. ಮಹಿಳೆ ತನ್ನ ಕುಟುಂಬದ ಪ್ರಗತಿಯ ಜತೆಗೆ ಸುಭದ್ರ, ಸುಸಂಸ್ಕೃತ ರಾಷ್ಟ್ರ ನಿರ್ಮಾಣದ ಕಾರಣೀಕರ್ತಳಾಗಿದ್ದಾಳೆ. ಇಂದಿನ ಆಧುನಿಕ ಕಾಲದಲ್ಲಿ ಮಹಿಳೆ ಎಲ್ಲ ಕ್ಷೇತ್ರಗಳಲ್ಲಿ ಸಮರ್ಥವಾಗಿ ಕಾರ್ಯ ನಿರ್ವಹಿಸುವಂತಹ ಸಾಮರ್ಥ್ಯವನ್ನು ಪಡೆದಿದ್ದಾಳೆ. ಮಹಿಳೆಯರ ಬಗ್ಗೆ ಕೀಳುರಿಮೆ ಬೇಡ, ಹೆಣ್ಣು-ಗಂಡೆಂಬ ಭೇದಭಾವ ಮಾಡದೆ ಎಲ್ಲರಿಗೂ ಉತ್ತಮ ಆರೋಗ್ಯ, ಶಿಕ್ಷಣ ನೀಡಬೇಕು ಎಂದರು.

ಪಂಚಮಸಾಲಿ ಸಮಾಜದ ರಾಜ್ಯ ಉಪಾಧ್ಯಕ್ಷೆ ವಸಂತಾ ಹುಲ್ಲತ್ತಿ ಕಾರ್ಯಕ್ರಮ ಉದ್ಘಾಟಿಸಿ ಮಾತನಾಡಿದರು. ರಾಷ್ಟ್ರಮಟ್ಟದ ಕುಸ್ತಿಪಟು ದೊಡ್ಡೂರು ಗ್ರಾಮದ ಜಯಶ್ರೀ ಅಮರಪ್ಪ ಗುಡಗುಂಟಿ ಅವರಿಗೆ ಸಮಾಜದ ಪರವಾಗಿ ಪ್ರಶಸ್ತಿ ನೀಡಿ ಗೌರವಿಸಲಾಯಿತು. ಸಭೆಯ ಅಧ್ಯಕ್ಷತೆಯನ್ನು ಸುನೀತಾ ಮಂಜುನಾಥ ಮಾಗಡಿ ವಹಿಸಿದ್ದರು. ಸುಧಾ ಹುಚ್ಚಣ್ಣವರ ನನ್ನಮ್ಮ ಸೂಪರ್‌ಸ್ಟಾರ್ ಕಾರ್ಯಕ್ರಮ ನೆರವೇರಿಸಿದರು. ಪುರಸಭೆ ಮಾಜಿ ಅಧ್ಯಕ್ಷೆ ಜಯಕ್ಕ ಅಂದಲಗಿ, ವಕೀಲೆ ನಂದಾ ಅಮಾಸಿ, ಅನ್ನಪೂರ್ಣ ಮಹಾಂತಶೆಟ್ಟರ, ಕೃತಿಕಾ ಮಾಗಡಿ, ಸಮಾಜದ ತಾಲೂಕ ಅಧ್ಯಕ್ಷ ಮಂಜುನಾಥ ಮಾಗಡಿ ಸೇರಿದಂತೆ ಅನೇಕರಿದ್ದರು. ಎಚ್.ಡಿ. ನಿಂಗರಡ್ಡಿ, ಸ್ನೇಹಾ ಹೊಟ್ಟಿ, ಮುಕ್ತಾ ಆದಿ ನಿರೂಪಿಸಿದರು.

## ನರೇಂದ್ರ ಮೋದಿಯವರ ಕ್ರಮಗಳು ಶ್ಲಾಘನೀಯ

■ ವಿಜಯಸಾಕ್ಷಿ ಸುದ್ದಿ, ಗದಗ

ದೇಶದ ಮಹಿಳೆಯರಿಗಾಗಿ ಪ್ರಧಾನಿ ನರೇಂದ್ರ ಮೋದಿಯವರು ಕೈಗೊಂಡ ಕ್ರಮಗಳು ಶ್ಲಾಘನೀಯ ಎಂದು ಭಾರತೀಯ ಜನತಾ ಪಾರ್ಟಿ ಗದಗ ಜಿಲ್ಲಾಧ್ಯಕ್ಷ ತೋಟಪ್ಪ(ರಾಜು) ಕುರುಡಗಿ ಹೇಳಿದ್ದಾರೆ.



ಈ ಬಗ್ಗೆ ಪತ್ರಿಕಾ ಹೇಳಿಕೆ ನೀಡಿರುವ ಅವರು, ಮಹಿಳೆಯರ ಘನತೆಯನ್ನು ಕಾಪಾಡಲು ಸ್ವಚ್ಛ ಭಾರತ್ ಯೋಜನೆಯಡಿ ಶೌಚಾಲಯ ನಿರ್ಮಾಣ, ಮಹಿಳೆಯರನ್ನು ಹೊಗೆ ಮುಕ್ತರನ್ನಾಗಿಸಲು ಉಜ್ವಲ ಯೋಜನೆಯಡಿ ದೇಶದ ಪ್ರತಿ ಮನೆಗೂ ಎಲ್‌ಪಿಜಿ ಸಂಪರ್ಕ, ಮಹಿಳೆಯರು ಹಣ ಉಳಿತಾಯಕ್ಕೆ ಶೂನ್ಯ ಬ್ಯಾಲೆನ್ಸ್ ಬ್ಯಾಂಕ್ ಖಾತೆ ತೆರೆಯಲು ಅವಕಾಶ, ದೂರದಿಂದ ನೀರು ತರುವುದನ್ನು ತಪ್ಪಿಸಲು ಜಲ್‌ಜೀವನ್ ಮಿಷನ್ ಯೋಜನೆಯಡಿ ಪ್ರತಿ ಮನೆಗೂ ನಲ್ಲಿ ನೀರು, ಮಹಿಳೆಯರ ಆರೋಗ್ಯ ಶುಚಿತ್ವ ಕಾಪಾಡುವ ಸಲುವಾಗಿ ಸ್ಯಾನಿಟರಿ ಪ್ಯಾಡ್‌ಗಳ ವಿತರಣೆ ಮತ್ತು ಅದರ ಬಗ್ಗೆ ತಿಳುವಳಿಕೆ, ರಾಜಕೀಯದಲ್ಲಿ ಮಹಿಳಾ ಪ್ರಾತಿನಿಧ್ಯ ಹೆಚ್ಚಿಸಲು ಶೇ.33ರಷ್ಟು ಮೀಸಲಾತಿ ಹೆಚ್ಚಿಸಿ ಮಹಿಳಾ ಸಶಕ್ತೀಕರಣಕ್ಕೆ ಒತ್ತು, ತ್ರಿವಳಿ ತಲಾಕ್ ನಿಷೇಧಿಸುವ ಮೂಲಕ ಮುಸ್ಲಿಂ ಮಹಿಳೆಯರ ಹಕ್ಕು-ಗೌರವ ಮತ್ತು ಘನತೆಯನ್ನು ಎತ್ತಿಹಿಡಿದಿರುವದು ಶ್ಲಾಘನೀಯ ಎಂದು ಸಂತಸ ವ್ಯಕ್ತಪಡಿಸಿದ್ದಾರೆ.

## ಮಾ. 21ರಂದು ಕ್ಯಾಂಪಸ್ ಸಂದರ್ಶನ

■ ವಿಜಯಸಾಕ್ಷಿ ಸುದ್ದಿ, ಗದಗ

ಮೆ. ಇಂಡೋ ಎಂಐಎಂ ಹೊಸಕೋಟೆ, ಬೆಂಗಳೂರು ಇವರು ಮಾರ್ಚ್ 21ರಂದು ಬೆ 11 ಗಂಟೆಗೆ ಸರ್ಕಾರಿ ಕೈಗಾರಿಕಾ ತರಬೇತಿ ಸಂಸ್ಥೆ ಮುಂಡರಗಿ ಇಲ್ಲಿ ಕ್ಯಾಂಪಸ್ ಸಂದರ್ಶನ ಹಮ್ಮಿಕೊಂಡಿದ್ದಾರೆ. ಐಟಿಐ ಫಿಟ್ಟರ್, ಟರ್ನರ್ ಮತ್ತು ಇಎಂ ವೃತ್ತಿಗಳಲ್ಲಿ ಪಾಸಾದ ತರಬೇತಾರ್ಥಿಗಳು ಅಪ್ರೆಂಟಿಸ್ ಶಿಪ್ / ಶಾರ್ಟ್ ಟರ್ಮ್ ಟ್ರೇನಿಂಗ್ ಪಡೆಯಲು ತಮ್ಮ ಮೂಲ ದಾಖಲಾತಿಗಳೊಂದಿಗೆ ಸಂದರ್ಶನಕ್ಕೆ ಹಾಜರಾಗಬಹುದಾಗಿದೆ.

ಹೆಚ್ಚಿನ ಮಾಹಿತಿಗಾಗಿ ಮುಂಡರಗಿ ಸರ್ಕಾರಿ ಕೈಗಾರಿಕಾ ತರಬೇತಿ ಸಂಸ್ಥೆಯ ಕಚೇರಿ ಸಮಯದಲ್ಲಿ ಭೇಟಿ ನೀಡಬಹುದಾಗಿದೆ. ದೂರವಾಣಿ ಸಂಖ್ಯೆ 9739944666/ 8951570462/ 9620842796 ಸಂಪರ್ಕಿಸಬಹುದಾಗಿದೆ.

## ತರಬೇತಿ ಅವಧಿಯಲ್ಲಿ ಜ್ಞಾನ ಭಂಡಾರ ಹೆಚ್ಚಿಸಿಕೊಳ್ಳಿ



■ ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ

ಇಂದಿನ ತಂತ್ರಜ್ಞಾನ ಆಧಾರಿತ ಶಿಕ್ಷಣ ವ್ಯವಸ್ಥೆಯಲ್ಲಿ ಭವಿಷ್ಯದಲ್ಲಿ ಶಿಕ್ಷಕರಾಗುವ ಪ್ರಶಿಕ್ಷಣಾರ್ಥಿಗಳು ಪಠ್ಯ ಶಿಕ್ಷಣದೊಂದಿಗೆ ಮಕ್ಕಳಿಗೆ ಪಠ್ಯೇತರ ಶಿಕ್ಷಣದ ಜ್ಞಾನವನ್ನು ನೀಡಬೇಕಾಗುತ್ತದೆ. ಈ ನಿಟ್ಟಿನಲ್ಲಿ ತರಬೇತಿ ಅವಧಿಯಲ್ಲಿ ಜ್ಞಾನ ಭಂಡಾರ ಹೆಚ್ಚಿಸಿಕೊಳ್ಳಬೇಕು ಎಂದು ಪಟ್ಟಣದ ಅಗಡಿ ಇಂಜಿನಿಯರಿಂಗ್ ಕಾಲೇಜಿನ ಸಹಾಯಕ ಪ್ರಾಧ್ಯಾಪಕ ಡಾ. ಗಿರೀಶ ಯತ್ತಿನಹಳ್ಳಿ ಹೇಳಿದರು.

ಅವರು ಪಟ್ಟಣದ ಚನ್ನಮ್ಮ ಶೈಕ್ಷಣಿಕ ವಿವಿದೋದ್ದೇಶಗಳ ಸಮಿತಿ ಶ್ರೀ ಸಹಸ್ರಾರ್ಜುನ ಶಿಕ್ಷಣ ಮಹಾವಿದ್ಯಾಲಯದಲ್ಲಿ ವಿದ್ಯಾರ್ಥಿ ಒಕ್ಕೂಟ ಮತ್ತು ಶೈಕ್ಷಣಿಕ ಚಟುವಟಕೆಗಳ ಕಾರ್ಯಾರಂಭ ಕಾರ್ಯಕ್ರಮದಲ್ಲಿ ಮಾತನಾಡಿದರು.

ಶೈಕ್ಷಣಿಕ, ಸಾಮಾಜಿಕ ಬದಲಾವಣೆಯಲ್ಲಿ ಶಿಕ್ಷಕರ ಪಾತ್ರ ಅತ್ಯಂತ ಮಹತ್ವದ್ದಾಗಿದೆ. ಪ್ರಶಿಕ್ಷಣಾರ್ಥಿಗಳು ಸದಾ ಓದುವ, ಬರೆಯುವ ಮತ್ತು ಶೈಕ್ಷಣಿಕ ಕ್ರಿಯಾ ಚಟುವಟಿಕೆಗಳಲ್ಲಿ ತಮ್ಮ ತೊಡಗಿಸಿಕೊಳ್ಳಬೇಕು. ಮೊಬೈಲ್ ಯುಗದಲ್ಲಿ ಶಿಕ್ಷಕರು ತರಗತಿ ಕೊಠಡಿಗೆ ಹೋಗುವ ಮೊದಲು ಪೂರ್ವಸಿದ್ಧತೆ ಮತ್ತು ಬಹಳಷ್ಟು ಅಪ್ಡೇಟ್ ಆಗಬೇಕಾಗುತ್ತದೆ ಎಂದರು.

ಆನಂದ ಗಡ್ಡದೇವರಮಠ ಮಾತನಾಡಿ, ಶಿಕ್ಷಕ ವೃತ್ತಿ ಅತ್ಯಂತ ಶ್ರೇಷ್ಠವಾಗಿದೆ. ಶಿಕ್ಷಕರು ಬಿತ್ತಿದ ಜ್ಞಾನದ ಬೀಜ ಮತ್ತು ಉತ್ತಮ ಆಲೋಚನೆ, ಸಂಸ್ಕಾರಗಳಿಂದ ವಿದ್ಯಾರ್ಥಿ ದೇಶದ ಸತ್ಪ್ರಜೆಯಾಗಲು ಸಾಧ್ಯವಾಗುತ್ತದೆ. ಮಕ್ಕಳ ಭವಿಷ್ಯದೊಂದಿಗೆ ದೇಶದ ಭವಿಷ್ಯ ಬರೆಯುವ ಗುರುತರ ಜವಾಬ್ದಾರಿ ವಹಿಸಬೇಕಾಗುತ್ತದೆ. ಬದಲಾದ ಕಾಲಕ್ಕೆ ತಕ್ಕಂತೆ ಶಿಕ್ಷಕರು ಮಾಹಿತಿ ಸಂವಹನ ತಂತ್ರಜ್ಞಾನ ಅಳವಡಿಸಿಕೊಳ್ಳಬೇಕಾಗುತ್ತದೆ ಎಂದರು.

ಶಿಕ್ಷಣ ಸಂಸ್ಥೆಯ ಅಧ್ಯಕ್ಷೆ ಗೀತಾ ಖೋಡೆ ಅಧ್ಯಕ್ಷತೆ ವಹಿಸಿದ್ದರು. ವಸಂತಸಾ ಜಿ.ಖೋಡೆ, ಶೇಷಗಿರಸಾ ಬಾಕಳೆ, ಕೃಷ್ಣಸಾ ಖೋಡೆ, ಮಲ್ಲಯ್ಯ ಹೊಸಮಠ, ಪರಶುರಾಮ ಬದಿ, ಖೀರಾಸಾ ಕರಾತೆ, ಎಂ. ಸಿದ್ದಲಿಂಗಯ್ಯ, ಜಿ.ಎಸ್. ಖೋಡೆ, ವೆಂಕಟೇಶ ಪೂಜಾರಿ, ಎಂ.ಡಿ. ಶಿದ್ಲಿಂಗ ಸೇರಿ ಹಲವರಿದ್ದರು. ಪ್ರಾಚಾರ್ಯ ಆರ್.ಎಂ. ಅಂಗಡಿ ಸ್ವಾಗತಿಸಿದರು.

# ಬಿಜೆಪಿ ಮಂಡಲ ಅಧ್ಯಕ್ಷರ ಆಯ್ಕೆ ಸ್ವಾಗತಾರ್ಹ

■ ವಿಜಯಸಾಕ್ಷಿ ಸುದ್ದಿ, ಹರಪನಹಳ್ಳಿ

ವಿಶ್ವಕರ್ಮ ಸಮಾಜದ ಮುಖಂಡ ಕೆ.ಲಕ್ಷ್ಮಣ ಅವರನ್ನು ಬಿಜೆಪಿ ಮಂಡಲ ಅಧ್ಯಕ್ಷರನ್ನಾಗಿ ಮಾಡಿರುವುದು ಸ್ವಾಗತಾರ್ಹ. ಆದರೆ ಮಾಜಿ ಶಾಸಕ ಜಿ.ಕರುಣಾಕರ ರೆಡ್ಡಿ ಅವರು ಅಧ್ಯಕ್ಷ ಸ್ಥಾನವನ್ನು ರದ್ದು ಪಡಿಸುವಂತೆ ವಿರೋಧಿಸಿ ಹೇಳಿಕೆ ನೀಡಿರುವುದು ಸಮಂಜಸವಲ್ಲ ಎಂದು ಸಮಾಜದ ಮುಖಂಡ ಕಲ್ಲಹಳ್ಳಿ ಗೋಣೆಪ್ಪ ಆರೋಪಿಸಿದ್ದಾರೆ.

ಪಟ್ಟಣದ ಪ್ರವಾಸಿ ಮಂದಿರದಲ್ಲಿ ವಿಶ್ವಕರ್ಮ ಸಮಾಜದ ಮುಂಡರು ನಡೆಸಿದ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಪಕ್ಷದ ವರಿಷ್ಠರು ಸಣ್ಣ ಸಮಾಜದ ವ್ಯಕ್ತಿಯನ್ನು ಗುರುತಿಸಿ ಎರಡನೇ ಬಾರಿ ಪಕ್ಷ ಸಂಘಟನೆ ಜವಾಬ್ದಾರಿಯನ್ನು ನೀಡಿದ್ದಾರೆ. ಮಾಜಿ ಶಾಸಕರು ಪಕ್ಷದ ಕಾರ್ಯಕರ್ತರಲ್ಲಿರುವ ಭಿನ್ನಾಭಿಪ್ರಾಯಗಳನ್ನು ಮನ್ನಿಸಿ ಪಕ್ಷದ ವರಿಷ್ಠರು ಕೆ.ಲಕ್ಷ್ಮಣ ಅವರಿಗೆ ನೀಡಿರುವ ಹುದ್ದೆಯನ್ನು ಮುಂದುವರೆಸಲು ಸಹಕರಿಸಬೇಕು ಎಂದು ಮನವಿ ಮಾಡಿದರು.



ದಾವಣಗೆರೆ ಜಿಲ್ಲಾ ಸಮಾಜದ ಅಧ್ಯಕ್ಷ ಮಂಜುನಾಥ, ತಾಲೂಕು ಅಧ್ಯಕ್ಷ ಹನುಮಂತಪ್ಪ ಮಾತನಾಡಿದರು. ಮುಖಂಡರಾದ ರಂಗಾಪುರದ ಭರಮಪ್ಪ, ವಿರೂಪಾಕ್ಷಪ್ಪ, ಹಾಲೇಶ್, ನರಸಿಂಹ, ವೆಂಕಟೇಶ್ ಕಲ್ಲಹಳ್ಳಿ, ಮಂಜುನಾಥ ಹಾಗೂ ಇತರರು ಹಾಜರಿದ್ದರು.

## ರಾಜ್ಯಮಟ್ಟದ ವಾಲಿಬಾಲ್ ಪಂದ್ಯಾವಳಿ ಮಾ.17ಕ್ಕೆ

■ವಿಜಯಸಾಕ್ಷಿ ಸುದ್ದಿ, ಶಿರಹಟ್ಟಿ

ತಾಲೂಕಿನ ಬನ್ನಿಕೊಪ್ಪ ಗ್ರಾಮದಲ್ಲಿ ದಿ.ಹನುಮಂತ ದೇವಪ್ಪ ವಡ್ಡಟ್ಟಿ ಇವರ ಸ್ಮರಣಾರ್ಥ ರಾಜ್ಯಮಟ್ಟದ ಪುರುಷರ ಮುಕ್ತ ವಾಲಿಬಾಲ್ ಪಂದಾವಳಿಯು ಮಾ.17ರ ಬೆಳಿಗ್ಗೆ 9 ಗಂಟೆಗೆ ಬನ್ನಿಕೊಪ್ಪ ಗ್ರಾಮದ ಸರಕಾರಿ ಹಿರಿಯ ಪ್ರಾಥಮಿಕ ಗಂಡು ಮಕ್ಕಳ ಶಾಲೆಯ ಆವರಣದಲ್ಲಿ ನಡೆಯಲಿದೆ. ಪ್ರಥಮ ಬಹಮಾನ 3,00,001, ದ್ವಿತೀಯ ಬಹುಮಾನ 2,00,001, ತೃತೀಯ ಬಹುಮಾನ 15,001, ಚತುರ್ಥ ಬಹುಮಾನ 10,001 ರೂ. ಹಾಗೂ ಆಕರ್ಷಕ ಟ್ರೋಫಿ ಇರುತ್ತದೆ. ಹೆಸರು ನೋಂದಾಯಿಸಲು ಮಾ.16 ಕೊನೆಯ ದಿನವಾಗಿದ್ದು, ಹೆಚ್ಚಿನ ಮಾಹಿತಿಗಾಗಿ ರೋಹಿತ–9731449557, ಗುರುರಾಜ–7760445402, ರವಿ–8197398175,ಹನಮಂತ–9880019728, ಅಶೋಕ–9008385290, ಮಂಜುನಾಥ–8970348787, ಆನಂದ–9148825271 ಇವರನ್ನು ಸಂಪರ್ಕಿಸಬಹುದಾಗಿದೆ.

## 13 ಲಕ್ಷ ರೂ. ಉಳಿತಾಯ ಬಜೆಟ್ ಮಂಡನೆ

■ವಿಜಯಸಾಕ್ಷಿ ಸುದ್ದಿ, ಶಿರಹಟ್ಟಿ



ಶಿರಹಟ್ಟಿ ಪಟ್ಟಣ ಪಂಚಾಯಿತಿ ಆಡಳಿತಾಧಿಕಾರಿ ಹಾಗೂ ತಹಸೀಲ್ದಾರ ಅನಿಲ ಬಡಿಗೇರ ಅಧ್ಯಕ್ಷತೆಯಲ್ಲಿ 2024–25ನೇ ಸಾಲಿನ ಪಟ್ಟಣ ಪಂಚಾಯಿತಿಯ 13 ಲಕ್ಷ ಉಳಿತಾಯ ಬಜೆಟ್ ಮಂಡಿಸಲಾಗಿದೆ ಎಂದು ಪ.ಪಂ ಮುಖ್ಯಾಧಿಕಾರಿ ಸಿದ್ದರಾಯ ಕಟ್ಟಿಮನಿ ತಿಳಿಸಿದ್ದಾರೆ.

ಆಯ–ವ್ಯಯದಲ್ಲಿ ರಾಜಸ್ವ ಸ್ವೀಕೃತಿಗಳು 35834018 ರೂ, ಬಂಡವಾಳ ಸ್ವೀಕೃತಿಗಳು 14910000 ರೂ, ಅಸಾಧಾರಣ ಸ್ವೀಕೃತಿಗಳು 1718007 ರೂ ಸೇರಿದಂತೆ ಒಟ್ಟು 67924025 ರೂ.ಗಳಲ್ಲಿ ರಾಜಸ್ವ ಪಾವತಿಗಳು 29159018 ರೂ, ಬಂಡವಾಳ ಪಾವತಿಗಳು 27500005 ರೂ, ಅಸಾಧಾರಣ ಪಾವತಿಗಳು 9890005 ರೂ. ಹೀಗೆ ಒಟ್ಟು ಪಾವತಿಗಳು 66549028 ರೂ. ಆಗುವುದರೊಂದಿಗೆ 1374997 ರೂ.ನಷ್ಟು ಉಳಿತಾಯ ಬಜೆಟ್ ಇದಾಗಿದೆ ಎಂದು ಮುಖ್ಯಾಧಿಕಾರಿ ತಿಳಿಸಿದ್ದಾರೆ.

### ಪುರಸಭೆ ಕಾರ್ಯಾಲಯದಲ್ಲಿ ಲೋಕಾಯುಕ್ತದಿಂದ ಸಾರ್ವಜನಿಕರ ಅಹವಾಲು ಸ್ವೀಕಾರ ಸಭೆ

# ಕಡ್ಡಾಯವಾಗಿ ದರಪಟ್ಟಿ ಅಳವಡಿಸಿ

■ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ

ಸರ್ಕಾರದ ಎಲ್ಲ ಇಲಾಖೆಯ ಅಧಿಕಾರಿಗಳು ಕಚೇರಿ ಅವಧಿಯಲ್ಲಿ ಸರಿಯಾಗಿ ಕಾರ್ಯ ನಿರ್ವಹಿಸಬೇಕು. ಕಚೇರಿಗಳಲ್ಲಿ ಸಿಸಿ ಕ್ಯಾಮರಾ, ಬಯೋಮೆಟ್ರಿಕ್ ಅಳವಡಿಸಿಕೊಳ್ಳಬೇಕು ಮತ್ತು ಮಧ್ಯವರ್ತಿಗಳಿಗೆ ಅವಕಾಶ ಕಲ್ಪಿಸಬೇಡಿ. ದೂರು ಬಂದಲ್ಲಿ ಕ್ರಮ ಕೈಗೊಳ್ಳಲಾಗುತ್ತದೆ ಎಂದು ಲೋಕಾಯುಕ್ತ ಡಿವೈಎಸ್‌ಪಿ ವಿಜಯ ಬಿರಾದಾರ ಹೇಳಿದರು.

ಅವರು ಬುಧವಾರ ಪಟ್ಟಣದ ಪುರಸಭೆ ಕಾರ್ಯಾಲಯದಲ್ಲಿ ಸಾರ್ವಜನಿಕರ ಕುಂದು–ಕೊರತೆ, ಅಹವಾಲು ಸ್ವೀಕಾರ ಸಭೆಯಲ್ಲಿ ಮಾತನಾಡಿ, ಯಾವುದೇ ಸರ್ಕಾರಿ ಅಧಿಕಾರಿಗಳು ತಮ್ಮ ವ್ಯಾಪ್ತಿ ಹೊರತುಪಡಿಸಿ ಸರ್ಕಾರಿ ವಾಹನ ಬಳಸುವಂತಿಲ್ಲದಿದ್ದರೂ ಕೆಲ ಅಧಿಕಾರಿಗಳು ವಾಹನ ದುರುಪಯೋಗ ಮಾಡಿಕೊಳ್ಳುತ್ತಿದ್ದಾರೆ. ವಸತಿ ಶಾಲೆಗಳಲ್ಲಿ ವಾರ್ಡನ್, ಗ್ರಾ.ಪಂ ಕಚೇರಿಗಳಲ್ಲಿ ಪಿಡಿಓಗಳು ಬಹುತೇಕ ಹೊರಗಡೆಯೇ ಇರುತ್ತಾರೆ. ಕಚೇರಿಯಲ್ಲಿ ಚಲನವಲನ ರಜಿಸ್ಟರ್ ಕಡ್ಡಾಯವಾಗಿ ಬಳಸಬೇಕು ಎಂದರು.

ಸಭೆಯಲ್ಲಿ ಪಟ್ಟಣದ ಮಂಜುನಾಥ ಹೊಗೆಸೊಪ್ಪಿನ, ಕಳೆದ ಹತ್ತಾರು ವರ್ಷಗಳ ಹಿಂದೆಯೇ 40 ಕೋಟಿ ರೂ ವೆಚ್ಚದಲ್ಲಿ ಪ್ರಾರಂಭಗೊಂಡ ಒಳಚರಂಡಿ ಯೋಜನೆ ಕಾಮಗಾರಿ ಸಂಪೂರ್ಣ ವಿಫಲವಾಗಿದೆ. ಈ ಬಗ್ಗೆ ತನಿಖೆಯಾಗಬೇಕು ಎಂದು ದೂರು ಸಲ್ಲಿಸಿದರು.




ಸದಾನಂದ ನಂದೆಣ್ಣವರ, ಕೋಟ್ಯಾಂತರ ರೂ ವೆಚ್ಚದಲ್ಲಿ ಪಟ್ಟಣದಲ್ಲಿ ಕೊಳಚೆ ನಿರ್ಮೂಲನ ಮಂಡಳಿಯಿಂದ ನಡೆಯುತ್ತಿರುವ ಆಶ್ರಯ ಮನೆಗಳು ಸಂಪೂರ್ಣ ಕಳಪೆಯಾಗಿವೆ ಮತ್ತು ಅಪೂರ್ಣಗೊಂಡಿದ್ದು, ಗುತ್ತಿಗೆದಾರರು ಆಡಿದ್ದೇ ಆಟವಾಗಿದೆ. ಈ ಬಗ್ಗೆ ತನಿಖೆಯಾಗಬೇಕು ಎಂದು ದೂರು ಸಲ್ಲಿಸಿದರು.

ಶಿಗ್ಲಿ ಗ್ರಾ.ಪಂ ಸದಸ್ಯ ಸುರೇಶ ಸ್ವಾದಿ, ಶಿಗ್ಲಿ ಗ್ರಾಮ ಪಂಚಾಯಿತಿ ಅಧಿಕಾರಿಗಳು ಗ್ರಾ.ಪಂ ಒಡೆತನದ ಆಸ್ತಿಯನ್ನು ಒತ್ತುವರಿ ಮತ್ತು ಪರಭಾರೆ ಮಾಡಿದ್ದಾರೆ. ಕಡು ಬಡವರಿಗೆ ಮೀಸಲಿಟ್ಟ ನಿವೇಶನಗಳನ್ನು ಉಳ್ಳವರಿಗೆ ಪರಭಾರೆ ಮಾಡಿದ್ದಾರೆ. ಒಟ್ಟಿನಲ್ಲಿ ಆಗಿರುವ ಅಕ್ರಮ ತನಿಖೆಗೊಳಪಟ್ಟು ಸಾರ್ವಜನಿಕರಿಗೆ ನ್ಯಾಯ ಸಿಗಬೇಕು ಎಂದು ಮನವಿ ಮಾಡಿದರು.

ಸಭೆಯಲ್ಲಿ ಪಾಲ್ಗೊಂಡಿದ್ದ ವಿವಿಧ ಇಲಾಖೆಯ ಅಧಿಕಾರಿಗಳಿಗೆ ತಮ್ಮ ಇಲಾಖೆಯ ಬಗ್ಗೆ ಸಾರ್ವಜನಿಕರು ಕೊಡುವ ದೂರುಗಳ ಬಗ್ಗೆ ತಿಳಿಸಿ ಎಚ್ಚೆತ್ತುಕೊಳ್ಳುವಂತೆ ವಿಜಯ ಬಿರಾದಾರ ಸೂಚಿಸಿದರು. ಸಭೆಯಲ್ಲಿ ಸಾರ್ವಜನಿಕರಿಂದ ಆರೋಗ್ಯ, ಪೊಲೀಸ್, ಪಿಡಬ್ಲೂಡಿ, ಕಂದಾಯ ಇಲಾಖೆಯ ಬಗ್ಗೆ ಕೆಲವು ಲಿಖಿತ ಮತ್ತು ಹಲವು ಮೌಖಿಕ ದೂರುಗಳು ಸಲ್ಲಿಕೆಯಾದವು.

ಈ ಸಂದರ್ಭದಲ್ಲಿ ತಹಸೀಲ್ದಾರ ವಾಸುದೇವ ಸ್ವಾಮಿ, ಲೋಕಾಯುಕ್ತ ಆರಕ್ಷಕ ನಿರೀಕ್ಷಕ ರವಿ ಪುರುಷೋತ್ತಮ, ಎಸ್.ಎಸ್. ತೇಲಿ, ಮುಖ್ಯಾಧಿಕಾರಿ ಮಹೇಶ ಹೆಚ್ ಮತ್ತು ವಿವಿಧ ಇಲಾಖೆಯ ಅಧಿಕಾರಿ–ಸಿಬ್ಬಂದಿಗಳಿದ್ದರು.

ಗ್ರಾ.ಪಂ ಮತ್ತು ಪುರಸಭೆ ವ್ಯಾಪ್ತಿಯಲ್ಲಿ ಅದರಲ್ಲೂ ಅಂಗನವಾಡಿ, ಶಾಲಾ–ಕಾಲೇಜು ಸುತ್ತಮುತ್ತ ಸ್ವಚ್ಛತೆ ಕಾಪಾಡುತ್ತಿಲ್ಲ. ಶುದ್ಧ ಆಹಾರ ಪದಾರ್ಥ ಮತ್ತು ಕುಡಿಯುವ ನೀರಿನ ಸಮಸ್ಯೆಗಳ ಬಗ್ಗೆ ದೂರುಗಳು ಹೆಚ್ಚುತ್ತಿವೆ. ಸಂಬಂಧಪಟ್ಟ ಅಧಿಕಾರಿಗಳು ಈ ಬಗ್ಗೆ ನಿಗಾ ವಹಿಸಬೇಕು. ಸಬ್ ರಜಿಸ್ಟ್ರಾರ್ ಕಚೇರಿಯಲ್ಲಿ ಬಾಂಡ್ ರೈಟರ್‌ಗಳಿಗೆ, ಮಧ್ಯವರ್ತಿಗಳಿಗೆ ಮುಕ್ತ ಅವಕಾಶ ಕಲ್ಪಿಸಬೇಡಿ. ದರಪಟ್ಟಿ ಕಡ್ಡಾಯವಾಗಿ ಸಾರ್ವಜನಿಕರಿಗೆ ಕಾಣುವಂತೆ ಅಳವಡಿಸಿ ಎಂದು ವಿಜಯ ಬಿರಾದಾರ ಹೇಳಿದರು.

## ಮತದಾನ ಜಾಗೃತಿ ಕಾರ್ಯಕ್ರಮ




■ವಿಜಯಸಾಕ್ಷಿ ಸುದ್ದಿ, ಗದಗ

ನೆಹರು ಯುವ ಕೇಂದ್ರ ಗದಗ, ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್, ಜಿಲ್ಲಾ SVEEP ಸಮಿತಿ ಗದಗ ಮತ್ತು ಪಂಡಿತ್ ಪಂಚಾಕ್ಷರ ಗವಾಯಿಗಳವರ ಶಿಕ್ಷಣ ಮಹಾವಿದ್ಯಾಲಯ ಇವರ ಸಂಯುಕ್ತ ಆಶ್ರಯದಲ್ಲಿ ಮತದಾರರ ಜಾಗೃತಿ ಕಾರ್ಯಕ್ರಮವನ್ನು ಹಮ್ಮಿಕೊಳ್ಳಲಾಗಿತ್ತು.

ಕಾರ್ಯಕ್ರಮದಲ್ಲಿ ನೆಹರು ಯುವ ಕೇಂದ್ರದ ಜಿಲ್ಲಾ ಯುವ ಸಮನ್ವಾಧಿಕಾರಿ ಎನ್.ರಂಜನಿ ಮಾತನಾಡಿ, ಪ್ರತಿಯೊಬ್ಬರೂ ಕಡ್ಡಾಯವಾಗಿ ಮತದಾನವನ್ನು ಮಾಡಬೇಕೆಂದು ವಿದ್ಯಾರ್ಥಿಗಳಿಗೆ ತಿಳಿಸಿದರು.

ಕಾರ್ಯಕ್ರಮದಲ್ಲಿ ಗದಗ ಜಿಲ್ಲಾ ಪಂಚಾಯತಿಯ ಸಿಬ್ಬಂದಿ ವರ್ಗ ಮತ್ತು ಕಾಲೇಜಿನ ಸಿಬ್ಬಂದಿ ವರ್ಗದವರು ಭಾಗವಹಿಸಿದ್ದರು.

## ಸಿಬ್ಬಂದಿಗಳಿಗೆ ಸಾಮರ್ಥ್ಯಾಭಿವೃದ್ಧಿ ಕಾರ್ಯಾಗಾರ

■ವಿಜಯಸಾಕ್ಷಿ ಸುದ್ದಿ, ಗದಗ

ಗದಗ ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್, ಮಕ್ಕಳ ರಕ್ಷಣಾ ನಿರ್ದೇಶನಾಲಯ ಬೆಂಗಳೂರು, ವೈದ್ಯಕೀಯ ವಿಜ್ಞಾನಗಳ ಸಂಸ್ಥೆಗಳು, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ, ಜಿಲ್ಲಾ ಪೊಲೀಸ್ ಇಲಾಖೆ, ಜಿಲ್ಲಾ ಮಕ್ಕಳ ರಕ್ಷಣಾ ಘಟಕ ಗದಗ ಇವರ ಸಹಯೋಗದಲ್ಲಿ ಬಾಲನ್ಯಾಯ (ಮಕ್ಕಳ ಪಾಲನೆ ಮತ್ತು ರಕ್ಷಣೆ) ಕಾಯ್ದೆ–2015 ಹಾಗೂ ದತ್ತು ಮಾರ್ಗಸೂಚಿಗಳು–ವೈದ್ಯರು, ನರ್ಸ್ ಹಾಗೂ ಸಿಬ್ಬಂದಿಗಳಿಗೆ ಸಾಮರ್ಥ್ಯಾಭಿವೃದ್ಧಿ ತರಬೇತಿ ಕಾರ್ಯಕ್ರಮವನ್ನು ಜಿಲ್ಲಾ ಪಂಚಾಯತ ಸಭಾಂಗಣದಲ್ಲಿ ಹಮ್ಮಿಕೊಳ್ಳಲಾಗಿತ್ತು.



ಜಿಲ್ಲಾ ಮಕ್ಕಳ ರಕ್ಷಣಾಧಿಕಾರಿ ರಫೀಕಾ ಹಳ್ಳೂರ ಕಾರ್ಯಕ್ರಮ ಉದ್ಘಾಟಿಸಿ ಮಾತನಾಡುತ್ತಾ, ಬಾಲನ್ಯಾಯ (ಮಕ್ಕಳ ಪಾಲನೆ ಮತ್ತು ರಕ್ಷಣೆ) ಕಾಯ್ದೆ–2015 ಹಾಗೂ ದತ್ತು ಮಾರ್ಗಸೂಚಿಗಳ ಕುರಿತು ವೈದ್ಯರು, ನರ್ಸ ಹಾಗೂ ಸಿಬ್ಬಂದಿಗಳಿಗೆ ಸಾಮರ್ಥ್ಯಾಭಿವೃದ್ಧಿ ತರಬೇತಿ ಕಾರ್ಯಕ್ರಮ ಹಮ್ಮಿಕೊಳ್ಳಲಾಗಿದೆ. ಮಾಹಿತಿ ನೀಡಲು ಉತ್ತಮವಾದ ಸಂಪನ್ಮೂಲ ವ್ಯಕ್ತಿಗಳು ಬಂದಿದ್ದು, ಅವರೊಂದಿಗೆ ಮಾಹಿತಿ ಪಡೆದು ತಾವು ಕೂಡಾ ಕಾಯ್ದೆಗಳನ್ನು ಚರ್ಚಿಸುವುದು ಮುಖ್ಯವಾಗಿದೆ ಎಂದು ತಿಳಿಸಿದರು.

ಜೆ.ಸಿ. ರೇಶ್ಮಿ ಪೋಕ್ಸೋ ಕಾಯ್ದೆ, ಬಾಲ್ಯವಿವಾಹ ನಿಷೇಧ ಕಾಯ್ದೆ ಕುರಿತು ಹಾಗೂ ಸಿಸ್ಟರ್ ಡುಲ್ಸಿನ್, ಬಾಲನ್ಯಾಯ ಕಾಯ್ದೆ (ಮಕ್ಕಳ ಪಾಲನೆ ಮತ್ತು ರಕ್ಷಣೆ) ಕಾಯ್ದೆ, ದತ್ತು ಮಾರ್ಗಸೂಚಿ ಕುರಿತು ಉಪನ್ಯಾಸ ನೀಡಿದರು. ಕಾರ್ಯಕ್ರಮದಲ್ಲಿ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ, ಜಿಲ್ಲಾ ಪೊಲೀಸ್ ಇಲಾಖೆ, ಜಿಲ್ಲಾ ಮಕ್ಕಳ ರಕ್ಷಣಾ ಘಟಕ ಸಿಬ್ಬಂದಿ ವರ್ಗದವರು ಹಾಜರಿದ್ದರು. ಮಲ್ಲಪ್ಪ ಹೊಸಳ್ಳಿ ಕಾರ್ಯಕ್ರಮ ನಿರೂಪಿಸಿದರು.

## ಕೇಂದ್ರ ಸರ್ಕಾರದ ನಿರ್ಲಕ್ಷ್ಯಕ್ಕೆ ರೈತರ ಆಕ್ರೋಶ

■ವಿಜಯಸಾಕ್ಷಿ ಸುದ್ದಿ, ಗದಗ

ದೆಹಲಿಯಲ್ಲಿ ನಡೆಯುತ್ತಿರುವ ರೈತ ಚಳುವಳಿಯ ಮೇಲೆ ಕೇಂದ್ರ ಸರ್ಕಾರ ನಡೆಸಿರುವ ಫ್ಯಾಸಿಸ್ಟ್ ದಾಳಿಯನ್ನು ಖಂಡಿಸಿ, ಭಾರತ ಡಬ್ಲ್ಯೂ.ಟಿ.ಓ.ದಿಂದ ಹೊರ ಬರಲು ಒತ್ತಾಯಿಸಿ ದೇಶಾದ್ಯಂತ ಹೋರಾಟಕ್ಕೆ ಕರೆ ಕೊಟ್ಟಿದ್ದರಿಂದ, ಸಂಯುಕ್ತ ಹೋರಾಟ ಕರ್ನಾಟಕ ಎಸ್.ಕೆ.ಎಮ್, ಕರ್ನಾಟಕ ರಾಜ್ಯ ರೈತ ಸಂಘ, ಹಸಿರು ಸೇನೆ ಎ.ಆರ್. ನಾರಾಯಣರೆಡ್ಡಿ ಬಣ್ಣದ ಕರೆಯ ಮೇರೆಗೆ ತಿಮ್ಮಾಪೂರ ಗ್ರಾಮದ ಸಂಗೊಳ್ಳಿ ರಾಯಣ್ಣ ವೃತ್ತದಲ್ಲಿ ಪಂಜಿನ ಪ್ರತಿಭಟನಾ ಮೆರವಣಿಗೆ, ಬಹಿರಂಗ ಸಭೆ ನಡೆಸಲಾಯಿತು.




ಈ ಸಂದರ್ಭದಲ್ಲಿ ಮಾತನಾಡಿದ ರೈತ ಸಂಘದ ಗದಗ ಜಿಲ್ಲಾಧ್ಯಕ್ಷ ಯಲ್ಲಪ್ಪ ಎಚ್.ಬಾಬರಿ, ದ್ವೇಷದ ಕೋಮುವಾದಿ ರಾಜಕೀಯದಲ್ಲಿ ಪ್ರಾಣ ಕಳೆದುಕೊಂಡ ಬಿಜೆಪಿಯ ಕಾರ್ಯಕರ್ತರಿಗೆ ತಲಾ 20ರಿಂದ 50 ಲಕ್ಷ ರೂ ಪರಿಹಾರ ಕೊಡುವ ಕೇಂದ್ರ ಸರ್ಕಾರ, ದೆಹಲಿಯ ಐತಿಹಾಸಿಕ ರೈತರ ಚಳುವಳಿಯಲ್ಲಿ ಪ್ರಾಣ ಅರ್ಪಿಸಿದ 780 ರೈತರ ಕುಟುಂಬಕ್ಕೆ ಯಾವುದೇ ಪರಿಹಾರ ಕೊಟ್ಟಿಲ್ಲ. ಭೀಕರ ಬರಗಾಲವನ್ನು ರಾಷ್ಟ್ರೀಯ ವಿಪತ್ತು ಎಂದು ಘೋಷಿಸಿಲ್ಲ. ರೈತರ ಸಾಲ ಮನ್ನಾ ಮಾಡಿಲ್ಲ, ಬೆಳೆ ನಷ್ಟ ಪರಿಹಾರ, ಬೆಳೆ ವಿಮೆ ಹಾಗೂ ಉದ್ಯೋಗ ಖಾತ್ರಿ ಕೂಲಿಯನ್ನು ಕೊಡುತ್ತಿಲ್ಲ.

ಈ ಎಲ್ಲ ಬೆಳವಣಿಗೆಗಳಿಂದ ಸರ್ಕಾರಕ್ಕೆ ರೈತರ ಸಮಸ್ಯೆಯನ್ನು ಪರಿಹರಿಸುವ ಮನಸ್ಸಿಲ್ಲ ಎನ್ನುವುದು ಸ್ಪಷ್ಟವಾಗಿದೆ. ಸರ್ಕಾರದ ಫ್ಯಾಸಿಸ್ಟ್ ನೀತಿಯ ವಿರುದ್ಧ ದೇಶದ ಜನರು ಬೀದಿಗಿಳಿಯಬೇಕಾಗುತ್ತದೆ ಎಂದು ಹೇಳಿದರು.

ಈ ಸಂದರ್ಭದಲ್ಲಿ ಶರಣಪ್ಪ ಜೋಗಿನ, ಹನುಮಪ್ಪ ತಳವಾರ, ಉದಯ ಗಂಗರಾತ್ರಿ, ಮಾರುತಿ ಕೊಪದ್ದ, ಹೇಮಂತ ಉಚಿಡಿ, ಗಣೇಶ ಅಕ್ಕಸಾಲಿ, ಬಸವರಾಜ ಬಂಟಗೌಡ್ರ, ಫಕೀರಪ್ಪ ಗುಡ್ಲಾನೂರ, ಮಂಜುನಾಥ ಗಂಗರಾತ್ರಿ, ಸುರೇಶ ಹಳ್ಳಿಕೇರಿ ಸೇರಿದಂತೆ ನೂರಾರು ರೈತರು ಪಾಲ್ಗೊಂಡಿದ್ದರು.

## ಸಾಧಕರಿಗೆ ಕೃಷ್ಣಗೌಡ ಪಾಟೀಲರಿಂದ ಸನ್ಮಾನ



■ವಿಜಯಸಾಕ್ಷಿ ಸುದ್ದಿ, ಗದಗ

ಗದಗ–ಬೆಟಗೇರಿ ನಗರಸಭೆಯ ವಾರ್ಡ್ ನಂ. 2ರ ಕುಷ್ಟಗಿ ಚಾಳದಲ್ಲಿ ವಿಶೇಷ ಸಾಧನೆ ಮಾಡಿದ ವಿದ್ಯಾರ್ಥಿಗಳನ್ನು ಕೃಷ್ಣಗೌಡ ಎಚ್.ಪಾಟೀಲ ಗೌರವಿಸಿ ಸನ್ಮಾನಿಸಿದರು.

ಹರ್ಷಿತ ಪುಷ್ಪೇಂದ್ರ ಪುಂಗಲಿಯಾ ಅಯೋಧ್ಯೆಯ ಶ್ರೀ ರಾಮಮಂದಿರದ ಚಿತ್ರ ರಚಿಸಿ, ರಾಷ್ಟ್ರಮಟ್ಟದಲ್ಲಿ ದ್ವಿತೀಯ ಸ್ಥಾನ ಪಡೆದ ನಿಮಿತ್ತ ಹಾಗೂ ಕುಸುಮಾ ಆನಂದ ಜೋಶಿ ಕ್ಯಾನ್ಸರ್ ತಡೆಗಟ್ಟುವ ವಿಶೇಷ ಔಷಧ ಸಂಶೋಧನೆಗಾಗಿ ರಾಜೀವಗಾಂಧಿ ವಿಶ್ವವಿದ್ಯಾಲಯದಿಂದ ಪ್ರಶಸ್ತಿಯನ್ನು ಪಡೆದ ನಿಮಿತ್ತ ಕೃಷ್ಣಗೌಡ ಪಾಟೀಲ ಸನ್ಮಾನಿಸಿ ಗೌರವಿಸಿದರು.

ಶಂಭು ಹುನಗುಂದ, ಲಕ್ಷ್ಮಣ ವಡ್ಡರಕಲ್ಲ ವೇದಿಕೆಯಲ್ಲಿದ್ದರು. ಮುಖ್ಯ ಅತಿಥಿಗಳಾದ ಎಸ್.ಎನ್.ಬಳ್ಳಾರಿ, ಸುರೇಶ ಕಟ್ಟಿಮನಿ, ಪ್ರಲ್ಹಾಹ ಮಿರ್ಜಿ, ಬಸವರಾಜ ಕಡೇಮನಿ, ಶಿವರಾಜ ಕೊರಸ, ಸಾವಿತ್ರಿ ಹೂಗಾರ, ಹೇಮಲತಾ ಪುಂಗಲಿಯಾ, ಮಲ್ಲಣ್ಣ ಬೆಟದೂರ, ಮಹೇಶ ಗುರುಗಳು, ಮಡಿವಾಳ, ಪ್ರವೀಣ ಚಪ್ಪರಮನಿ ಉಪಸ್ಥಿತರಿದ್ದರು.

## ಸಾಮರ್ಥ್ಯಾಭಿವೃದ್ಧಿ ತರಬೇತಿ ಕಾರ್ಯಕ್ರಮ

■ವಿಜಯಸಾಕ್ಷಿ ಸುದ್ದಿ, 000

ವಿಜಯಸಾಕ್ಷಿ ಸುದ್ದಿ, ಗದಗ

ಗದಗ ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್, ಮಕ್ಕಳ ರಕ್ಷಣಾ ನಿರ್ದೇಶನಾಲಯ ಬೆಂಗಳೂರು, ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರ, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ, ಜಿಲ್ಲಾ ಪೊಲೀಸ್ ಇಲಾಖೆ, ಜಿಲ್ಲಾ ಮಕ್ಕಳ ರಕ್ಷಣಾ ಘಟಕ ಗದಗ ಇವರ ಸಹಯೋಗದಲ್ಲಿ ಜಿ.ಪಂ ಸಭಾಂಗಣದಲ್ಲಿ ಬಾಲನ್ಯಾಯ (ಮಕ್ಕಳ ಪಾಲನೆ ಮತ್ತು ರಕ್ಷಣೆ) ಕಾಯ್ದೆ, ದತ್ತು ಮಾರ್ಗಸೂಚಿಗಳ ಕುರಿತು ಪೊಲೀಸ್ ಇಲಾಖೆ ತನಿಖಾ ಅಧಿಕಾರಿ/ಸಹಾಯಕರು ಹಾಗೂ ಪಂಚಾಯತಿ ಅಭಿವೃದ್ಧಿ ಅಧಿಕಾರಿಗಳಿಗೆ ಸಾಮರ್ಥ್ಯಾಭಿವೃದ್ಧಿ ತರಬೇತಿ ಕಾರ್ಯಕ್ರಮವನ್ನು ಹಮ್ಮಿಕೊಳ್ಳಲಾಗಿತ್ತು.

ಮಕ್ಕಳ ಕಲ್ಯಾಣ ಸಮಿತಿ ಅಧ್ಯಕ್ಷೆ ಅನ್ನಪೂರ್ಣ ಗಾಣಗೇರ ಕಾರ್ಯಕ್ರಮವನ್ನು ಉದ್ಘಾಟಿಸಿದರು. ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆಯ ಮಹಿಳಾ ಅಧಿಕಾರಿ ಕಮಲವ್ವ ಬೆಳ್ಳೂರು ಮಾತನಾಡಿ, ಇಲಾಖೆ ಹಲವಾರು ತರಬೇತಿ ಕಾರ್ಯಾಗಾರವನ್ನು ಹಮ್ಮಿಕೊಂಡಿದ್ದು, ಇದರ ಸದುಪಯೋಗ ಪಡೆಯಬೇಕೆಂದರು.




ಜೆ.ಸಿ. ರೇಶ್ಮಿ ಪೋಕ್ಸೋ ಕಾಯ್ದೆ, ಬಾಲ್ಯವಿವಾಹ ನಿಷೇಧ ಕಾಯ್ದೆ ಕುರಿತು ಉಪನ್ಯಾಸ ನೀಡಿದರು. ಸಿಸ್ಟರ್ ಡುಲ್ಸಿನ್, ಬಾಲನ್ಯಾಯ ಕಾಯ್ದೆ (ಮಕ್ಕಳ ಪಾಲನೆ ಮತ್ತು ರಕ್ಷಣೆ) ಕಾಯ್ದೆ, ದತ್ತು ಮಾರ್ಗಸೂಚಿ ಕುರಿತು ಉಪನ್ಯಾಸ ನೀಡಿದರು. ಜಿಲ್ಲಾ ಮಕ್ಕಳ ರಕ್ಷಣಾಧಿಕಾರಿ ರಫೀಕಾ ಹಳ್ಳೂರು ಪ್ರಸ್ತಾವಿಕವಾಗಿ ಮಾತನಾಡಿದರು.

ಕಾರ್ಯಕ್ರಮದಲ್ಲಿ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ, ಜಿಲ್ಲಾ ಪೊಲೀಸ್ ಇಲಾಖೆ, ಜಿಲ್ಲಾ ಮಕ್ಕಳ ರಕ್ಷಣಾ ಘಟಕಗಳ ಸಿಬ್ಬಂದಿ ವರ್ಗದವರು ಹಾಜರಿದ್ದರು. ಮಲ್ಲಪ್ಪ ಹೊಸಳ್ಳಿ ಕಾರ್ಯಕ್ರಮ ನಿರೂಪಿಸಿದರು.

## ದಿ. ಕೆ.ಎಚ್. ಪಾಟೀಲ ಅಜರಾಮರ

■ವಿಜಯಸಾಕ್ಷಿ ಸುದ್ದಿ, ಗದಗ



ಸಹಕಾರಿ ರಂಗದ ಬೀಷ್ಮ, ಮಾಜಿ ಸಚಿವ, ಹಿರಿಯ ಕಾಂಗ್ರೆಸ್ ಮುಖಂಡರಾದ ದಿ. ಕೆ.ಎಚ್. ಪಾಟೀಲ್ ಅವರ ಹೆಸರನ್ನು ಬೆಂಗಳೂರಿನ ವಾರ್ಡ್ ನಂ.18, ರಾಧಾಕೃಷ್ಣ ವಾರ್ಡಿನ ಎಂ.ಎಸ್. ರಾಮಯ್ಯ ಸಿಗ್ನಲ್‌ನಿಂದ ಅಶ್ವಥ ನಗರದ ರಸ್ತೆಗೆ ನಾಮಕರಣ ಮಾಡಿರುವುದಕ್ಕೆ ಕಾಂಗ್ರೆಸ್ ಮುಖಂಡ ಕರೀಮಸಾಬ ಸುಣಗಾರ ಬೆಂಗಳೂರು ಮಹಾನಗರ ಪಾಲಿಕೆಯನ್ನು ಅಭಿನಂದಿಸಿದ್ದಾರೆ.

ಈ ಬಗ್ಗೆ ಪತ್ರಿಕಾ ಹೇಳಿಕೆ ನೀಡಿರುವ ಅವರು, ಹುಲಕೋಟಿಯ ಹುಲಿ ಎಂದೇ ಖ್ಯಾತರಾದ ದಿ. ಕೆ.ಎಚ್. ಪಾಟೀಲ್ ಅವರ ಹೆಸರನ್ನು ನಾಮಕಾರಣ ಮಾಡುವ ಮೂಲಕ ಅವರ ಆದರ್ಶ ಬದುಕನ್ನು ಯುವ ಪೀಳಿಗೆಗೆ ಮಾರ್ಗದರ್ಶಿಯಾಗಿಸಲು ಮುಂದಾಗಿರುವದು ಅಭಿನಂದನಾರ್ಹ ವಿಚಾರವಾಗಿದೆ. ಉಕ್ಕಿನ ಮಹಿಳೆ ಎಂದೇ ಖ್ಯಾತರಾದ ಮಾಜಿ ಪ್ರಧಾನಿ ದಿ. ಇಂದಿರಾ ಗಾಂಧಿ ಅವರನ್ನು ಗದಗ ನಗರಕ್ಕೆ ಆಹ್ವಾನಿಸಿ ಗದಗ ಜನತೆಗೆ ದರ್ಶನ ಭಾಗ್ಯ ಕಲ್ಪಿಸಿದ, ಶ್ರೇಷ್ಠ ರಾಜಕೀಯ ವ್ಯಕ್ತಿತ್ವದ ಮೂಲಕ ದೇಶದ ರಾಜಕೀಯ ರಂಗದಲ್ಲಿ ತಮ್ಮ ಸೃಜನಾತ್ಮಕ ಕ್ರಿಯಾಶೀಲ ಚಟುವಟಿಕೆಗಳ ಮೂಲಕ ಹೆಸರವಾಸಿಯಾಗಿರುವ ದಿ. ಕೆ.ಎಚ್. ಪಾಟೀಲರ ಕೀರ್ತಿ ಅಜರಾಮರವಾಗಿರುವುದು ಗದಗ ಜನತೆಗೆ ಹೆಮ್ಮೆಯ ಸಂಗತಿಯಾಗಿದೆ ಎಂದು ಸ್ಮರಿಸಿದ್ದಾರೆ.

VIJAYA SAKSHI KANNADA DAILY MORNING Editor, Printer, Publisher, & Owned by : Hussainsab M. Shareefanavar, H.No. 130/154, Balaji Nagar, Near Ring Road, Gadag-582103, Dist : Gadag- Karnataka Printed at : Sai Printing Press, Near Joda Maruti Temple, Gadag-582101, Dist : Gadag- Karnataka